ಸಂಪುಟ 01 । ಸಂಚಿಕೆ 243 ಶನಿವಾರ 07 ನವೆಂಬರ್ 2026 । ಪುಟ 4 । ಬೆಲೆ-2 ರೂ.

Posting registration number : RCR/RNP/116/2026-2028

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1)ದೀಪಾವಳಿ ಹಬ್ಬದ ಆರಂಭ: ಇಂದು ದೇಶಾದ್ಯಂತ ಐದು ದಿನಗಳ ದೀಪಾವಳಿ ಹಬ್ಬದ ಮೊದಲ ದಿನವಾದ ಧನತ್ರಯೋದಶಿ (ಧನ್ತೇರಸ್) ಅನ್ನು ಆಚರಿಸಲಾಗುತ್ತಿದೆ.

3)ಯುದ್ಧದಲ್ಲಿ ಪರಿಸರ ಶೋಷಣೆ ತಡೆಗಟ್ಟುವ ದಿನ: ಇಂದು ಯುದ್ಧ ಮತ್ತು ಸಶಸ್ತ್ರ ಸಂಘರ್ಷದಲ್ಲಿ ಪರಿಸರ ಶೋಷಣೆಯನ್ನು ತಡೆಗಟ್ಟುವ ಅಂತರರಾಷ್ಟ್ರೀಯ ದಿನವಾಗಿದೆ

ಸುಭಾಷಿತ

"ಬದುಕಿನಲ್ಲಿ ಬರುವ ಕಷ್ಟಗಳು
ನಿನ್ನನ್ನು ಮುರಿಯಲು ಅಲ್ಲ,
ಬದಲಿಗೆ ನಿನ್ನ ಶಕ್ತಿಯನ್ನು
ಅರಿಯಲು."

ರವೀಂದ್ರನಾಥ ಟ್ಯಾಗೋರ್

ಭಾರೀ ಬೇಡಿಕೆ ನಡುವೆಯೂ ಕರ್ನಾಟಕದಲ್ಲಿ 191 ಎಂಬಿಬಿಎಸ್ ಸೀಟುಗಳು ಖಾಲಿ

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ದೇಶಾದ್ಯಂತ ವೈದ್ಯಕೀಯ ಶಿಕ್ಷಣ ಪಡೆಯಲು ಲಕ್ಷಾಂತರ ವಿದ್ಯಾರ್ಥಿಗಳು ಪೈಪೋಟಿ ನಡೆಸುತ್ತಿರುವಾಗ, ವೈದ್ಯಕೀಯ ಶಿಕ್ಷಣದ ಪ್ರಮುಖ ಕೇಂದ್ರವಾಗಿರುವ ಕರ್ನಾಟಕದಲ್ಲಿ 191 ಎಂಬಿಬಿ-ಎಸ್ ಸೀಟುಗಳು ಖಾಲಿ ಉಳಿದಿರುವುದು ಅಚ್ಚರಿ ಮೂಡಿಸಿದೆ.



ವೈದ್ಯಕೀಯ ಸೀಟುಗಳಿಗೆ ಭಾರೀ ಬೇಡಿಕೆಯಿದ್ದರೂ, ದುಬಾರಿ ಶುಲ್ಕ, ಖಾಸಗಿ ಕಾಲೇಜುಗಳ ಮೇಲಿನ ಅವಲಂಬನೆ ಮತ್ತು ಮೂಲಸೌಕರ್ಯಗಳ ಕೊರತೆಯಿಂದಾಗಿ ಕೆಲವು ಸೀಟುಗಳಿಗೆ ವಿದ್ಯಾರ್ಥಿಗಳು ಪ್ರವೇಶ ಪಡೆಯಲು ಹಿಂದೇಟು ಹಾಕಿರುವುದು ಚರ್ಚೆಗೆ ಗ್ರಾಸವಾಗಿದೆ. 2026ನೇ ಸಾಲಿನಲ್ಲಿ ದೇಶದ 839 ವೈದ್ಯಕೀಯ ಕಾಲೇಜುಗಳಲ್ಲಿರುವ ಸುಮಾರು 1.4 ಲಕ್ಷ ಎಂಬಿಬಿಎಸ್ ಸೀಟುಗಳಿಗಾಗಿ ಬರೋಬ್ಬರಿ 23 ಲಕ್ಷ ವಿದ್ಯಾರ್ಥಿಗಳು ಸ್ಪರ್ಧಿಸಿದ್ದರು. ಇಷ್ಟೊಂದು ತೀವ್ರ ಪೈಪೋಟಿಯ ನಡುವೆಯೂ ಕರ್ನಾಟಕದಲ್ಲಿ ಪ್ರವೇಶ ಪ್ರಕ್ರಿಯೆ ಮುಕ್ತಾಯಗೊಂಡಾಗ 191 ಸೀಟುಗಳು ಭರ್ತಿಯಾಗದೆ ಉಳಿದಿವೆ.

ದೇಶಾದ್ಯಂತ ಕೌನ್ಸೆಲಿಂಗ್ ಪ್ರಕ್ರಿಯೆ ಮುಗಿದ ಬಳಿಕ ಸುಮಾರು 2,000 ಎಂಬಿಬಿ-ಎಸ್ ಸೀಟುಗಳು ಖಾಲಿ ಉಳಿದಿರುವುದು ವೈದ್ಯಕೀಯ ಶಿಕ್ಷಣದ ವೆಚ್ಚ ಮತ್ತು ಲಭ್ಯತೆಯ ನಡುವಿನ ಅಂತರವನ್ನು ಎತ್ತಿ ತೋರಿಸಿದೆ. ಈ ಹಿನ್ನೆಲೆಯಲ್ಲಿ ಕೇಂದ್ರದ ಮೆಡಿಕಲ್ ಕೌನ್ಸೆಲಿಂಗ್ ಸಮಿತಿ ಅಕ್ಟೋಬರ್ 30ರಂದು ದೇಶಾದ್ಯಂತ ಖಾಲಿ ಉಳಿದಿರುವ ಸೀಟುಗಳನ್ನು ಭರ್ತಿ ಮಾಡಲು ವಿಶೇಷ ಸ್ಟ್ರೇ ವೇಕೆನ್ಸಿ ರೌಂಡ್ ಕೌನ್ಸೆಲಿಂಗ್ ನಡೆಸುವುದಾಗಿ ಘೋಷಿಸಿದೆ. ಸೀಟುಗಳ ಸಂಖ್ಯೆಯಲ್ಲಿ ಕರ್ನಾಟಕ ನಂಬರ್ ಒನ್ ದೇಶದಲ್ಲೇ ಅತಿ ಹೆಚ್ಚು ಎಂಬಿಬಿಎಸ್ ಸೀಟುಗಳನ್ನು ಹೊಂದಿರುವ ರಾಜ್ಯ ಕರ್ನಾಟಕ. 76 ವೈದ್ಯಕೀಯ ಕಾಲೇಜುಗಳಲ್ಲಿ ಒಟ್ಟು 15,745 ಸೀಟುಗಳು ಲಭ್ಯವಿವೆ. ಈ ವರ್ಷ ರಾಜ್ಯಕ್ಕೆ ಹೆಚ್ಚುವರಿ 1,650 ಸೀಟುಗಳು ಸೇರ್ಪಡೆಯಾಗಿವೆ. ಒಟ್ಟು ಸೀಟುಗಳಲ್ಲಿ ಶೇ.71ರಷ್ಟು ಅಂದರೆ 11,145 ಸೀಟುಗಳು ಖಾಸಗಿ ವಲಯದಲ್ಲಿವೆ. ಹೀಗಾಗಿ ವೈದ್ಯಕೀಯ ಶಿಕ್ಷಣಕ್ಕೆ ಖಾಸಗಿ ಕಾಲೇಜುಗಳ ಮೇಲಿನ ಅವಲಂಬನೆ ರಾಜ್ಯದಲ್ಲಿ ಹೆಚ್ಚಾಗಿದೆ.ನಕ್ಷೆಗಳನ್ನು ನೋಡಿ ಇನ್ನೊಂದೆಡೆ ಕರ್ನಾಟಕದಲ್ಲಿ ಈ ವರ್ಷ 1,45,466 ಮಂದಿ ನೀಟ್ ಪರೀಕ್ಷೆ ಮೂಲಕ ವೈದ್ಯಕೀಯ ಸೀಟುಗಳಿಗಾಗಿ ನೋಂದಾಯಿಸಿಕೊಂಡಿದ್ದಾರೆ. ದೇಶದ ರಾಜ್ಯಗಳ ಪೈಕಿ ಅಭ್ಯರ್ಥಿಗಳ ಸಂಖ್ಯೆಯಲ್ಲಿ ಕರ್ನಾಟಕ ಐದನೇ ಸ್ಥಾನದಲ್ಲಿದೆ. ಉತ್ತರಪ್ರದೇಶ 3,56,291, ಮಹಾರಾಷ್ಟ್ರ 2,22,905, ರಾಜಸ್ಥಾನ 2,03,470 ಮತ್ತು ಬಿಹಾರ 1,56,061 ಅಭ್ಯರ್ಥಿಗಳನ್ನು ಹೊಂದಿವೆ. **ಶುಲ್ಕವೇ ದೊಡ್ಡ ಅಡ್ಡಿ:** ಕರ್ನಾಟಕದಲ್ಲಿ ವೈದ್ಯಕೀಯ ಸೀಟುಗಳು ಖಾಲಿ ಉಳಿಯಲು ಪ್ರಮುಖ ಕಾರಣ ಖಾಸಗಿ ವೈದ್ಯಕೀಯ ಶಿಕ್ಷಣದ ದುಬಾರಿ ಶುಲ್ಕ ಎನ್ನಲಾಗಿದೆ. ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿ ವಾರ್ಷಿಕ ಶುಲ್ಕ 25 ಲಕ್ಷದಿಂದ 45 ಲಕ್ಷ ರೂ.ವರೆಗೆ ತಲುಪುತ್ತಿದೆ. ಇದಕ್ಕೆ ಹಾಸ್ಟೆಲ್, ಊಟ, ಪುಸ್ತಕ, ಇತರ ವೆಚ್ಚಗಳನ್ನು ಸೇರಿಸಿದರೆ ಒಟ್ಟು ಖರ್ಚು ಸಾಮಾನ್ಯ ಕುಟುಂಬಗಳ ಕೈಗೆಟುಕದಂತಾಗಿದೆ. ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಸಾಮಾನ್ಯ ಸೀಟಿನ ವಾರ್ಷಿಕ ಶುಲ್ಕ 64,350 ರೂ.ಗಳಷ್ಟಿದೆ. ಆದರೆ ಎನ್‌ಆರ್‌ಐ ಕೋಟಾದಡಿ ಪ್ರವೇಶ ಪಡೆಯುವರಿಗೆ ಇದೇ ಸರ್ಕಾರಿ ಕಾಲೇಜುಗಳಲ್ಲಿ ವಾರ್ಷಿಕ 25,09,350 ರೂ. ಶುಲ್ಕ ನಿಗದಿಪಡಿಸಲಾಗಿದೆ. ಖಾಸಗಿ ಕಾಲೇಜುಗಳಲ್ಲಿ ಸರ್ಕಾರದ ನಿಯಂತ್ರಣದಲ್ಲಿರುವ ಸೀಟುಗಳಿಗೆ ವಾರ್ಷಿಕ 1,53,571 ರೂ. ಶುಲ್ಕವಿದ್ದರೆ, ಖಾಸಗಿ ಕೋಟಾದ ಸೀಟುಗಳಿಗೆ 12,00,117 ರೂಪಾಯಿ ಪಾವತಿಸಬೇಕು. ಎನ್‌ಆರ್‌ಐ ಮತ್ತು ಮ್ಯಾನೇಜ್‌ಮೆಂಟ್ ಕೋಟಾದ ಶುಲ್ಕ ಕಾಲೇಜಿನಿಂದ ಕಾಲೇಜಿಗೆ ಬದಲಾಗುತ್ತದೆ. ಕೆಲವು ಸಂಸ್ಥೆಗಳಲ್ಲಿ ಇದು ವಾರ್ಷಿಕ 45 ಲಕ್ಷ ರೂ.ವರೆಗೂ ತಲುಪುತ್ತದೆ. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ಭಗವಾನ್ ಬಿ.ಸಿ. ಅವರು ವೈದ್ಯಕೀಯ ಕಾಲೇಜುಗಳು ಶುಲ್ಕ ನಿಗದಿಪಡಿಸುವಾಗ ಎಚ್ಚ-ರಿಕೆ ವಹಿಸಬೇಕು ಎಂದು ಸಲಹೆ ನೀಡಿದ್ದಾರೆ. ದುಬಾರಿ ಶುಲ್ಕದಿಂದಾಗಿ ಅರ್ಹತೆ ಮತ್ತು ಆಸಕ್ತಿ ಇದ್ದರೂ ಅನೇಕ ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣ ಪಡೆಯುವುದು ಕಷ್ಟವಾಗುತ್ತಿದೆ ಎಂಬ ಆತಂಕವೂ ವ್ಯಕ್ತವಾಗಿದೆ. **ಎನ್‌ಆರ್‌ಐ ಕೋಟಾ:** ಖಾಸಗಿ ಕಾಲೇಜುಗಳ ಸೀಟುಗಳಿಗೂ ಹೊಡೆತ: ಕರ್ನಾಟಕದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ 2025ರಲ್ಲಿ ಎನ್‌ಆರ್‌ಐ ಕೋಟಾ ಪರಿಚಯಿಸಿರುವುದು ಖಾಸಗಿ ಕಾಲೇಜುಗಳ ಮ್ಯಾನೇಜ್‌ಮೆಂಟ್ ಕೋಟಾದ ಸೀಟುಗಳು ಖಾಲಿ ಉಳಿಯಲು ಮತ್ತೊಂದು ಕಾರಣ ಎನ್ನಲಾಗಿದೆ. ಸರ್ಕಾರಿ ಸಂಸ್ಥೆಗಳು ತಮ ಆದಾಯವನ್ನು ಹೆಚ್ಚಿಸಿಕೊಂಡು ಸರ್ಕಾರದ ಅನುದಾನದ ಮೇಲಿನ ಅವಲಂಬನೆ ಕಡಿಮೆ ಮಾಡಿಕೊಳ್ಳುವ ಉದ್ದೇಶದಿಂದ ಈ ವ್ಯವಸ್ಥೆ ಜಾರಿಗೆ ತರಲಾಗಿತ್ತು. ಈ ವರ್ಷ ಸರ್ಕಾರಿ ಕಾಲೇಜುಗಳಲ್ಲಿ ಒಟ್ಟು 105 ಎನ್‌ಆರ್‌ಐ ಸೀಟುಗಳು ಲಭ್ಯವಿದ್ದು, ಪ್ರತಿ ಸೀಟಿಗೆ ವಾರ್ಷಿಕ ಸುಮಾರು 25.1 ಲಕ್ಷ ರೂಪಾಯಿ ಶುಲ್ಕ ನಿಗದಿಪಡಿಸಲಾಗಿತ್ತು. ಈ ಕೋಟಾದಡಿ ಪ್ರವೇಶ ಪಡೆಯಲು ವಿದೇಶಿ ಬ್ಯಾಂಕ್ ಖಾತೆ ಅಥವಾ ಭಾರತೀಯ ಬ್ಯಾಂಕ್‌ನಲ್ಲಿರುವ ಎನ್‌ಆರ್‌ಐ/ಎನ್‌ಆರ್‌ಇ ಖಾತೆಯ ಮೂಲಕ ಶುಲ್ಕ ಪಾವತಿಸುವ ನಿಯಮವಿದೆ. ಆದರೆ ಎನ್‌ಆರ್‌ಐ ಸ್ಥಾನಮಾನ ಇಲ್ಲದಿದ್ದರೂ ಹೆಚ್ಚಿನ ಶುಲ್ಕ ಪಾವತಿಸುವ ಸಾಮರ್ಥ್ಯ ಹೊಂದಿರುವ ವಿದ್ಯಾರ್ಥಿಗಳಿಗೆ ಇತರರು (ಅದರ್‌ರಸ) ಎಂಬ ಪ್ರತ್ಯೇಕ ಕೋಟಾ ಅವಕಾಶ ಕಲ್ಪಿಸುತ್ತದೆ. ಈ ಕೋಟಾದಡಿ ಭಾರತೀಯ ರೂಪಾಯಿಗಳಲ್ಲಿಯೇ ಶುಲ್ಕ ಪಾವತಿಸಬಹುದಾಗಿದೆ. ಮೂಲಸೌಕರ್ಯಗಳ ಕೊರತೆಯೂ ಪ್ರವೇಶಕ್ಕೆ ಹಿನ್ನಡೆ: ಶುಲ್ಕದ ಹೊರತಾಗಿ ಕೆಲವು ಹೊಸ ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿನ ಮೂಲಸೌಕರ್ಯಗಳ ಕೊರತೆಯೂ ವಿದ್ಯಾರ್ಥಿಗಳು ಪ್ರವೇಶ ಪಡೆಯಲು ಹಿಂದೇಟು ಹಾಕಲು ಕಾರಣವಾಗಿದೆ.

ಮರಸೆ ಮಾಕನ ಹುಂಡಿ ಸುತ್ತಮುತ್ತ ವ್ಯಾಘ್ರನ ಸಂಚಾರ ಗ್ರಾಮಸ್ಥರಲ್ಲಿ ಆತಂಕ

ನೈಜ್ಯ ದೆಸೆ ನ್ಯೂಸ್

ತಾಂಡವಪುರ ನವಂಬರ್ 6 ಮೈಸೂರ್ ತಾಲೂಕು ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಮರಸೆ ಮಾಕನ ಹುಂಡಿ ಗ್ರಾಮಗಳ ಸುತ್ತಮುತ್ತ ಬಾರಿ ಗಾತ್ರದ ವ್ಯಾಘ್ರ ನು ಸಂಚಾರ ಮಾಡುತ್ತ ಗ್ರಾಮಸ್ಥರಲ್ಲಿ ಆತಂಕ ಭಯದ ವಾತಾವರಣ ನಿರ್ಮಾಣವಾಗಿದೆ



ನಿನ್ನೆ ರಾತ್ರಿ ಮರೆಸೆ ಮಾಕನ ಹುಂಡಿ ಮುಖ್ಯ ರಸ್ತೆ ಮರ ಸೆ ಗ್ರಾಮದ ಸರ್ಕಾರಿ ಶಾಲೆ ಪಕ್ಕದಲ್ಲಿ ಸಂಚಾರ ಮಾಡುತ್ತಿರುವುದು ಮೊಬೈಲ್ ಕ್ಯಾಮೆರಾದಲ್ಲಿ ಸರಿಯಾಗಿದ್ದು ಇದನ್ನು ಕಂಡ ಗ್ರಾಮಸ್ಥರು ಭಯಭರಿತರಾಗಿದ್ದು ಮೊನ್ನೆ ಮಾಕನ ಹುಂಡಿ ಗ್ರಾಮದ ಕಬ್ಬಿನ ಗದ್ದೆಯಲ್ಲಿಹುಲಿರಾಯನು ಪ್ರತ್ಯಕ್ಷವಾಗಿ ಗ್ರಾಮಸ್ಥರಲ್ಲಿ ಆತಂಕ ಮತ್ತು ಭಯದ ವಾತಾವರಣ ನಿರ್ಮಾಣವಾಗಿದೆ ಸುಮಾರು ಒಂದು ವಾರಗಳಿಂದ ಈ ಹುಲಿರಾಯನು ಗ್ರಾಮಗಳ ಸುತ್ತಮುತ್ತ ಸಂಚಾರ ಮಾಡುತ್ತಿದ್ದು ಈ ಬಗ್ಗೆ ಅರಣ್ಯ ಇಲಾಖೆಯವರು ಕ್ರಮ ಕೈಗೊಂಡು ಹುಲಿಯನ್ನು ಬೇಕು ಮುಂದಾಗುವ ಅನಾಹುತಗಳನ್ನು ತಡೆಗಟ್ಟಲು ಅರಣ್ಯ ಇಲಾಖೆ ಅಧಿಕಾರಿಗಳು ಮುಂದಾಗಬೇಕು ಗ್ರಾಮಸ್ಥರು ನಿರ್ಭಯವಾಗಿ ರಸ್ತೆಯಲ್ಲಿ ಓಡಾಡಲು ಮತ್ತು ರೈತರು ತಮ್ಮ ಜೀವನಗಳಿಗೆ ಹೋಗಲು ಅನುಕೂಲ ಮಾಡಿಕೊಡಬೇಕೆಂದು ಮರಸೇ ಮತ್ತು ಮಾಕನ ಹುಂಡಿ ಗ್ರಾಮಸ್ಥರು ಅರಣ್ಯ ಇಲಾಖೆಯವರನ್ನು ಒತ್ತಾಯಿಸಿದ್ದಾರೆ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ಮೈಸೂರಿನಲ್ಲಿ ಭಾರತೀಯ ಜನತಾ ಪಾರ್ಟಿ ವತಿಯಿಂದ ಪ್ರಜಾಪ್ರಭುತ್ವ ಉಳಿಸಿ ಅರಾಜಕತೆ ಅಳಿಸಿ ಪಾದಯಾತ್ರೆ

ನೈಜ್ಯ ದೆಸೆ ನ್ಯೂಸ್

ತಾಂಡವಪುರ ನವಂಬರ್ 6ಮೈಸೂ-ರಿನಲ್ಲಿ ಭಾರತೀಯ ಜನತಾ ಪಾರ್ಟಿ ವತಿಯಿಂದ ಪ್ರಜಾಪ್ರಭುತ್ವ ಉಳಿಸಿ ? ಅರಾಜ-ಕತೆ ಅಳಿಸಿ ಎಂಬ ಘೋಷಣ ವಾಕ್ಯದೊಡನೆ ಪಕ್ಷದ ರಾಜ್ಯಾಧ್ಯಕ್ಷ ಬಿ ವೈ ವಿಜೇಂದ್ರ ಅವರ ನೇತೃತ್ವದಲ್ಲಿಪಾದಯಾತ್ರೆ ನಡೆಸಲಾಯಿತು ರಾಜ್ಯದ ಕಾಂಗ್ರೆಸ್ ಸರ್ಕಾರದ ದುರಾಡಳಿತ, ಆಡಳಿತ ವೈಫಲ್ಯ ಹಾಗೂ ಜನವಿರೋಧಿ



ನೀತಿಗಳನ್ನು ಖಂಡಿಸಿ ಹಮ್ಮಿಕೊಳ್ಳಲಾಗಿದ್ದ "ಪ್ರಜಾಪ್ರಭುತ್ವ ಉಳಿಸಿ ಅರಾಜಕತೆ ಅಳಿಸಿ" ಎಂಬ ಘೋಷವಾಕ್ಯದೊಂದಿಗೆ ನಡೆದ ಬೃಹತ್ ಪಾದಯಾತ್ರೆಯಲ್ಲಿ ಮಾತನಾಡಿದ ರಾಜ್ಯದಕ್ಷ ವಿಜಯೇಂದ್ರ ರವರು ರಾಜ್ಯ ಕಾಂಗ್ರೆಸ್ ಸರ್ಕಾರವು ಜನಸಾಮಾನ್ಯರಿಗೆ ಬೇಕಾಗುವ ಅಗತ್ಯ ವಸ್ತುಗಳ ಬೆಲೆ ಬೆಲೆಯನ್ನು ಏರಿಸಿ ರೈತ ವಿರೋಧಿ ಜನ ವಿರೋಧಿ ಬಡವರ ವಿರೋಧಿ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು ರಾಜ್ಯದಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳ ರಕ್ಷಣೆ, ರೈತರ ಬೇಡಿಕೆಗಳು, ಜನಸಾಮಾನ್ಯರ ಹಿತಾಸಕ್ತಿ ಹಾಗೂ ಉತ್ತಮ ಆಡಳಿತಕ್ಕಾಗಿ ಒಗ್ಗಟ್ಟಿನ ಧ್ವನಿ ಮೊಳಗಿಸುವ ಉದ್ದೇಶದಿಂದ ನಡೆದ ಈ ಪಾದಯಾತ್ರೆಯಲ್ಲಿ ಪಕ್ಷದ ಹಿರಿಯ ನಾಯಕರು, ಜನಪ್ರತಿನಿಧಿಗಳು, ಪದಾಧಿಕಾರಿಗಳು ಹಾಗೂ ಅಪಾರ ಸಂಖ್ಯೆಯ ಕಾರ್ಯಕರ್ತರು ಉತ್ಸಾಹದಿಂದ ಪಾಲ್ಗೊಂಡರು ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷರಾದ ಬಿವೈವಿಜಯೇಂದ್ರ ಸಂಸದ ಸಿಖಂಡದತ್ತ ಶ್ರೀಕಂಠ ದತ್ತ ಎದುವೀರ್ ಒಡೆಯರಮಾಜಿ ಸಚಿವರಾದ ಸಿ.ಟಿ. ರವಿ ಅವರು, ಮಾಜಿ ಸಂಸದರಾದ ಪ್ರತಾಪ್ ಸಿಂಹ ಅವರು, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಎನ್. ರವಿಕುಮಾರ್ ಅವರು, ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಪ್ರೀತಮ್ ಗೌಡ ಅವರು, ರಾಜ್ಯ ಉಪಾಧ್ಯಕ್ಷರಾದ ಎನ್. ಮಹೇಶ್ ಅವರು, ರಾಜ್ಯ ಕಾರ್ಯದರ್ಶಿಗಳಾದ ಡಾ. ಲಕ್ಷ್ಮಿ ಅಶ್ವಿನ್ ಗೌಡ ಶಾಸಕರಾದಶ್ರೀವತ್ಸ ಅವರು, ಸಿಮೆಂಟ್ ಮಂಜು ಅವರು, ಹೆಚ್.ಕೆ. ಸುರೇಶ್ ಅವರು, ವಿಧಾನ ಪರಿಷತ್ ಸದಸ್ಯರಾದ ರಘು ಕೌಟಿಲ್ಯ ಅವರು, ಶ್ರೀ ಸುಜಾ ಕುಶಾಲಪ್ಪ ಅವರು, ಮೈಸೂರು ನಗರ ಜಿಲ್ಲಾಧ್ಯಕ್ಷರಾದ ಎಲ್. ನಾಗೇಂದ್ರ ಅವರು, ಮೈಸೂರು ಗ್ರಾಮಾಂತರ ಜಿಲ್ಲಾಧ್ಯಕ್ಷರಾದ ಶ್ರೀ ಕೆ.ಎನ್. ಸುಬ್ಬಣ್ಣ ಅವರು ಸೇರಿದಂತೆ ಪಕ್ಷದ ಹಲವು ಮುಖಂಡರು, ಪದಾಧಿಕಾರಿಗಳು ಹಾಗೂ ಸಾವಿರಾರು ಪಕ್ಷದಕಾರ್ಯಕರ್ತರು ಭಾಗಿಯಾಗಿದ್ದರು

ಕೆರೆಗಳಿಗೆ ನೀರು ತುಂಬಿಸುವ ಭರವಸೆ ರೈತರ ಪ್ರತಿಭಟನೆ ಹಿಂಪಡೆತ

ಶಾಸಕ ದೊಡ್ಡನಗೌಡ ಪಾಟೀಲ್ ಸ್ಥಳಕ್ಕೆ ಭೇಟಿ ನೀಡಿ ರೈತರ ಮನವೊಲಿಕೆ

ನೈಜ್ಯ ದೆಸೆ ನ್ಯೂಸ್

ಹನುಮಸಾಗರ: ಕೆರೆಗಳಿಗೆ ನೀರು ತುಂಬಿಸುವಂತೆ ಒತ್ತಾಯಿಸಿ ಸಮೀಪದ ಬಾದಿಮನಾಳ ಕ್ರಾಸ್‌ನಲ್ಲಿ ರೈತರು ನಡೆಸುತ್ತಿದ್ದ ಪ್ರತಿಭಟನೆಗೆ ಬುಧವಾರ ತೆರೆ ಬಿದ್ದಿದೆ.



ಪ್ರತಿಭಟನಾ ಸ್ಥಳಕ್ಕೆ ಶಾಸಕ ದೊಡ್ಡನಗೌಡ ಪಾಟೀಲ್ ಭೇಟಿ ನೀಡಿ ರೈತರೊಂದಿಗೆ ಚರ್ಚಿಸಿ, ಕೆರೆಗಳಿಗೆ ನೀರು ತುಂಬಿಸುವ ಭರವಸೆ ನೀಡುವ ಮೂಲಕ ಪ್ರತಿಭಟನೆ ಹಿಂಪಡೆಯುವಂತೆ ಮನವೊಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ಬಾದಿಮನಾಳ ಹಾಗೂ ಗುಡ್ಡದೇವಲಾಪೂರ ಗ್ರಾಮದ ಕೆರೆಗಳಿಗೆ ನೀರು ತುಂಬಿಸಲು ತ್ವರಿತವಾಗಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಪೈಪ್‌ಲೈನ್ ದುರಸ್ತಿ ಕಾರ್ಯವನ್ನು ಆದಷ್ಟು ಬೇಗ ಪೂರ್ಣಗೊಳಿಸಲಾಗುವುದು.

ರೈತರ ಬೇಡಿಕೆಯಂತೆ ಹಗಲು-ರಾತ್ರಿ ಕೆರೆಗಳಿಗೆ ನೀರು ಹರಿಸಲಾಗುವುದು. ಇದರಿಂದ ಕೆರೆಗಳು ಶೀಘ್ರದಲ್ಲೇ ಭರ್ತಿಯಾಗಲಿವೆ. ತಾಂತ್ರಿಕ ಸಮಸ್ಯೆಗಳು ಎದುರಾದಲ್ಲಿ ಮಾತ್ರ ನೀರು ಹರಿಸಲು ವಿಳಂಬವಾಗಬಹುದು ಎಂದು ತಿಳಿಸಿದರು. ಶಾಸಕರ ಭರವಸೆಗೆ ಸ್ಪಂದಿಸಿದ ರೈತರು ಪ್ರತಿಭಟನೆಯನ್ನು ಹಿಂಪಡೆದರು.

ಈ ಸಂದರ್ಭದಲ್ಲಿ ಸಣ್ಣ ನೀರಾವರಿ ಇಲಾಖೆ ಎಇಇ ದೇವೇಂದ್ರಪ್ಪ ಇಟ್ಟಂಗಿ, ಪಿಎಸ್‌ಐ ಧನುಂಜಯ ಎಂ., ಮುಖಂಡರಾದ ಮರಿಯಪ್ಪ ಗ್ವಾತಗಿ, ವೀರಣ್ಣ ಗಜೇಂದ್ರಗಡ, ಮಹಾಂತೇಶ ಗಣವಾರಿ, ನಜೀರ್‌ಸಾಬ್ ಮೂಲಿಮನಿ, ಕೆ. ಎಸ್. ಹನುಮಂತಪ್ಪ, ಶರಣಪ್ಪ ಕುಂಬಾರ, ಸತ್ಯಪ್ಪ ರಾಜೂರು, ರವಿ ಪರಸಾಪೂರ, ಅಶೋಕ ವಾಲಿಕಾರ, ಶರಣಪ್ಪ ಪರಸಾಪೂರ, ನೀಲಪ್ಪ ಕಡಿಯವರ, ಯಮನೂರ ಮಡಿವಾಳರ, ಶ್ರೀಕಾಂತ ಅಂಗಡಿ, ಪರಶುರಾಮ ಮಾಸ್ತಕಟ್ಟಿ ಸೇ-ರಿದಂತೆ ರೈತರು ಉಪಸ್ಥಿತರಿದ್ದರು.

ಕಂಪ್ಲಿ ಸರ್ಕಾರಿ ಕಚೇರಿಗಳ ಮೇಲೆ ಲೋಕಾಯುಕ್ತ ದಾಳಿ: ಸಾರ್ವಜನಿಕರ ದೂರಿಗೆ ಸ್ಪಂದಿಸಿ ಕಡತಗಳ ಪರಿಶೀಲನೆ

ನೈಜ್ಯ ದೆಸೆ ನ್ಯೂಸ್

ಕಂಪ್ಲಿ: ಕಂಪ್ಲಿ ಪಟ್ಟಣದ ಪ್ರಮುಖ ಸರ್ಕಾರಿ ಕಚೇರಿಗಳಲ್ಲಿನ ಅವ್ಯವಸ್ಥೆ ಹಾಗೂ ಸಾರ್ವಜನಿಕರ ದೂರುಗಳ ಹಿನ್ನೆಲೆಯಲ್ಲಿ, ಲೋಕಾಯುಕ್ತ ಅಧಿಕಾರಿಗಳ ತಂಡ ಏಕಕಾಲದಲ್ಲಿ ಮಿಂಚಿನ ತಪಾಸಣೆ ಕೈಗೊಂಡಿದ್ದು, ಕರ್ತವ್ಯಲೋಪ ಹಾಗೂ ಭ್ರಷ್ಟಾಚಾರದ ಆರೋಪ ಹೊತ್ತಿರುವ ಅಧಿಕಾರಿಗಳಿಗೆ ಬಿಸಿ ಮುಟ್ಟಿಸಿದ್ದಾರೆ.



ಲೋಕಾಯುಕ್ತ ಅಧಿಕಾರಿಗಳ ತಂಡವು ಶುಕ್ರವಾರ ತಹಶೀಲ್ದಾರ್ ಕಚೇರಿ, ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರ(ಸರ್ಕಾರಿ ಆಸ್ಪತ್ರೆ) ಹಾಗೂ ಪುರಸಭೆ ಕಚೇರಿಗಳ ಮೇಲೆ ಅನಿರೀಕ್ಷಿತ ಭೇಟಿ ನೀಡಿ ವ್ಯಾಪಕ ಪರಿಶೀಲನೆ ನಡೆಸಿತು. ಬೆಂಗಳೂರ ಹಾಗೂ ಬಳ್ಳಾರಿಯಿಂದ ಆಗಮಿಸಿದ್ದ ಲೋಕಾಯುಕ್ತ ಡಿವೈ-ಎಸ್‌ಪಿ ಅನಿಲ್ ಕುಮಾರ್ ಅವರ ನೇತೃತ್ವದ ತಂಡದಲ್ಲಿ ಅಧಿಕಾರಿಗಳಾದ ಬಸವರಾಜ್, ವಸಂತ್ ಸೇರಿದಂತೆ ಇತರ ಸಿಬ್ಬಂದಿಗಳು ವಿವಿಧ ಇಲಾಖೆಗಳ ಕಾರ್ಯವೈಖರಿ ಹಾಗೂ ಕಡತಗಳನ್ನು ಕೂಲಂಕಷವಾಗಿ ತಪಾಸಣೆ ನಡೆಸಿದರು.

ದೂರಿನ ಹಿನ್ನೆಲೆಯಲ್ಲಿ ಕ್ರಮ: ಇಲ್ಲಿನ ಪುರಸಭೆ, ತಹಶೀಲ್ದಾರ್ ಕಚೇರಿ ಮತ್ತು ಸರ್ಕಾರಿ ಆಸ್ಪತ್ರೆಯಲ್ಲಿ ಸಾರ್ವಜನಿಕ ಕೆಲಸ ಕಾರ್ಯಗಳು ವಿಳಂಬವಾಗುತ್ತಿವೆ ಹಾಗೂ ಅಲ್ಲಿನ ಅವ್ಯವಸ್ಥೆಯ ಕುರಿತು ಜಾಗೃತ ನಾಗರಿಕರು ಲೋಕಾಯುಕ್ತರಿಗೆ ಲಿಖಿತ ಪತ್ರದ ಮೂಲಕ ದೂರು ಸಲ್ಲಿಸಿದ್ದರು. ಈ ಪತ್ರವನ್ನು ಗಂಭೀರವಾಗಿ ಪರಿಗಣಿಸಿದ ಉನ್ನತ ಅಧಿಕಾರಿಗಳ ನಿರ್ದೇಶನದ ಮೇರೆಗೆ ಈ ವಿಶೇಷ ತಪಾಸಣೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿದುಬಂದಿದೆ.

ಪರಿಶೀಲನೆ ವೇಳೆ ಕಚೇರಿಗಳಲ್ಲಿ ಕಂಡುಬಂದ ಲೋಪದೋಷಗಳ ಕುರಿತು ವರದಿಯನ್ನು ಸಿದ್ಧಪಡಿಸಲಾಗುತ್ತಿದ್ದಾರೆ, ಸಾರ್ವಜನಿಕರಿಗೆ ಅನಗತ್ಯ ತೊಂದರೆ ನೀಡುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮದ ಎಚ್ಚರಿಕೆ ನೀಡಲಾಗಿದ್ದು, ದಾಖಲೆಗಳ ಸಮಗ್ರ ಪರಿಶೀಲನೆಯ ನಂತರ ಮುಂದಿನ ಕ್ರಮ ಕೈಗೊಳ್ಳುವ ಸಾಧ್ಯತೆಯಿದೆ. ದಿಢೀರ್ ನಡೆದ ಈ ಕಾರ್ಯಾಚರಣೆಯಿಂದಾಗಿ ಸರ್ಕಾರಿ ಕಚೇರಿಗಳಲ್ಲಿ ಬಿಗಿ ವಾತಾವರಣ ನಿರ್ಮಾಣವಾಗಿತ್ತು.

ವರದಿ: ಜಿಲಾನಸಾಬ್ ಬಡಿಗೇರ್

ಸಾಹಿತ್ಯ ಸಿಂಚನ

ಭೂರಮೆ

ಹೇ ತಾಯಿಯೇ!..
ಭೂ ಮಾತೆಯೇ!..
ನಮ್ಮಾ ಜೀವಧಾತ್ರಿಯೇ!..
ನಮ್ಮಾ ಜೀವಧಾತ್ರಿಯೇ!..

ಎಂಥಾ ವಿಸ್ಮಯ ನಿನ್ನಯ ಒಡಲು!
ಜೀವಕ್ಕಾಸರೆ ನಿನ್ನಯ ಮಡಿಲು!
ತುಂಬಿ ತುಳುಕುತ್ತಿದೆ ನಿನ್ನೊಳು,
ಅಮೃತದಾ, ಸವಿಜೇನ ಕಡಲು.

ಗಿರಿ-ಪರ್ವತಗಳ ಸೃಷ್ಟಿಸಿರುವೆ,
ಸಾಹಸಿಗಳ ನಿದ್ದೆಗೆಡಿಸಿರುವೆ;
ಹಚ್ಚ-ಹಸಿರ ಹರಡಿರುವೆ,
ಸೌಂದರ್ಯವ ನೀ ಸೂಸಿರುವೆ!

ಜಲವ ಹೊತ್ತು ನಿಂತಿರುವೆ,
ಜೀವಿಗಳ ಜೀವ ಹಿಡಿದಿರುವೆ;
ಜಲಪಾತದ ಸೊಬಗ ಕರುಣಿಸಿ
ಜನಮನವ ನೀ ತಣಿಸಿರುವೆ.

ಹಸಿರ ನೀನು ಹೊದ್ದಿರಲು,
ಜೀವಿಗಳ ಉಸಿರು ಸಾಗುತಿಹುದು;
ಜೀವ ನೀಡುವ ಮಣ್ಣಿರಲು,
ಸಕಲ ಬದುಕು ಸಾಗುತಿಹುದು.

ಕುದಿಯುವ ಜ್ವಾಲಾಗ್ನಿ ನಿನ್ನೊಳಿದ್ದರೂ,
ಶಾಂತ ಸ್ವರೂಪಿಣಿ ನೀನು.
ಬಿರುಗಾಳಿ, ಭೂಕಂಪ ಭುಗಿಲೆದ್ದರೂ,
ಸಹನಾಮೂರ್ತಿ ತಾಯೆ ನೀನು.

ನಿನ್ನ ಗರ್ಭದಿ ಅವಿತ ಖನಿಜಗಳಿಂದ,
ಅರಳಿವೆ ಮನುಜರ ಮನಗಳು;
ಹೆಕ್ಕಿ ತೆಗೆದು ಸಿದ್ಧಗೊಳಿಸಲು,
ಉರುಳುತ್ತಿವೆ ಬಾಳಿನ ದಿನಗಳು.

ಪಂಚಭೂತಗಳ ನೀ ಕರುಣಿಸಿ,
ಪ್ರಾಣವು ನೆಲೆಸಲು ಕಾರಣಳಾದೆ;
ಸಕಲ ಜೀವರಾಶಿಯ ಬದುಕಿಸಿ,
ಪ್ರತ್ಯಕ್ಷ ದೇವತೆ ನೀನಾದೆ!

ಡಾ ಮಹೇಂದ್ರ ಕುರ್ಡಿ

ಮೌಲಾನಾ ಆಜಾದ್ ಶಾಲೆಯನ್ನು ಶಂಕರಬಂಡಿ ರಸ್ತೆ ಸಮೀಪ ಸ್ಥಳಾಂತರಿಸಲು ಕರವೇ ಆಗ್ರಹ

ನೈಜ್ಯ ದೆಸೆ ನ್ಯೂಸ್

ದೇವದುರ್ಗ: ರಾಯಚೂರು ಜಿಲ್ಲೆಯ ದೇವದುರ್ಗ ಪಟ್ಟಣದ ಗೌರಂಪೇಟೆ ಪ್ರದೇಶದಲ್ಲಿ ಮಂಜೂರಾಗಿರುವ ಮೌಲಾನಾ ಆಜಾದ್ ಶಾಲೆಯನ್ನು ಶಂಕರಬಂಡಿ ರಸ್ತೆ ಸಮೀಪದ ಪ್ರದೇಶಕ್ಕೆ ಸ್ಥಳಾಂತರಿಸಿ ನಿರ್ಮಾಣ ಮಾಡಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಹಾಗೂ ತಾಲೂಕು ಘಟಕದ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ.

ನ. 5ರಂದು ಸಲ್ಲಿಸಿರುವ ಮನವಿಯಲ್ಲಿ, ಗೌರಂಪೇಟೆ ಪ್ರದೇಶದಲ್ಲಿ ಶಾಲೆ ನಿರ್ಮಾಣ ಮಾಡುವುದರಿಂದ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳಿಗೆ ಎದುರಾಗಬಹುದಾದ ಸಮಸ್ಯೆಗಳ ಕುರಿತು ಜಿಲ್ಲಾಡಳಿತದ ಗಮನ ಸೆಳೆಯಲಾಗಿದೆ. ಶಾಲೆ ನಿರ್ಮಾಣಕ್ಕೆ ಸೂಕ್ತ ಸ್ಥಳವನ್ನು ಆಯ್ಕೆ ಮಾಡುವುದು ಅಗತ್ಯವಾಗಿದ್ದು, ವಿದ್ಯಾರ್ಥಿಗಳ ಅನುಕೂಲ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಶಂಕರಬಂಡಿ ರಸ್ತೆ ಸಮೀಪದ ಪ್ರದೇಶದಲ್ಲಿ ಶಾಲೆ ನಿರ್ಮಾಣಕ್ಕೆ ಅವಕಾಶ ಕಲ್ಪಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.



ಈ ಕುರಿತು ನ. 2ರಂದು ಸಂಬಂಧಪಟ್ಟ ಅಧಿಕಾರಿಗಳಿಗೂ ಮನವಿ ಸಲ್ಲಿಸಲಾಗಿತ್ತು. ಇದೀಗ ಜಿಲ್ಲಾಧಿಕಾರಿಗಳಿಗೂ ಮನವಿ ಸಲ್ಲಿಸಿ, ಶಾಲೆಯ ಸ್ಥಳ ಆಯ್ಕೆಯನ್ನು ಮರುಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಕರವೇ ಮುಖಂಡರು ಆಗ್ರಹಿಸಿದ್ದಾರೆ.

ಮನವಿ ಸಲ್ಲಿಸಿದವರು: ಕರವೇ ಜಿಲ್ಲಾ ಅಧ್ಯಕ್ಷ ವೀರೇಶ್ ಹೀರಾ, ಜಿಲ್ಲಾ ಉಪಾಧ್ಯಕ್ಷ ತುಳಜಾರಾಮ್, ಜಿಲ್ಲಾ ಕಾರ್ಯಾಧ್ಯಕ್ಷ ಶಿವು ಶಂಕರ್, ಜಿಲ್ಲಾ ಜಂಟಿ ಕಾರ್ಯದರ್ಶಿ ಶಾಂತಕುಮಾರ್, ದೇವದುರ್ಗ ತಾಲೂಕು ಅಧ್ಯಕ್ಷ ಬಸವರಾಜ್ ಗೋಪಾಲಪುರ, ತಾಲೂಕು ಕಾರ್ಯದರ್ಶಿ ಸುರೇಶ್ ಪಾಟೀಲ್, ಗೌರಂಪೇಟೆ ತಾಲೂಕು ಉಪಾಧ್ಯಕ್ಷ ಉಸ್ಮಾನ್ ಪಾಶ,

ನಗರ ಘಟಕದ ಅಧ್ಯಕ್ಷ ಹುಸೇನ್ ಭಾಷಾ, ನಗರ ಘಟಕದ ಉಪಾಧ್ಯಕ್ಷ ಉಸ್ಮಾನ್ ಬುವಾಜಿ, ನಗರ ಕಾರ್ಯದರ್ಶಿ ಬಾಬು ಬುವಾಜಿ, ಗೌರಂಪೇಟೆ ಪ್ರಧಾನ ಕಾರ್ಯದರ್ಶಿ ಇಬ್ರಾಹಿಂ ಸಾಬ್, ವಿದ್ಯಾರ್ಥಿ ಘಟಕದ ಅಧ್ಯಕ್ಷ ಸಲ್ಮಾನ್, ಗೌರವಾಧ್ಯಕ್ಷ ಹುಸೇನ್ ಭಾಷಾ ಸೇರಿದಂತೆ ಜಹಿರುದ್ದಿನ್, ನದೀಮ್, ಆಸೀಫ್, ದೇವರಾಜ್ ಹಾಗೂ ಬಾಬು ಉಪಸ್ಥಿತರಿದ್ದರು.

ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

ಕೊಪ್ಪಳದಲ್ಲಿ ಬಿಜೆಪಿ ಪಾದಯಾತ್ರೆ: ಡಾ. ಕಾಸಂ ವೆಂಕಟೇಶ್ವರಲು ಅವರಿಗೆ ಕುಷ್ಟಗಿ ಮಂಡಲ ಬಿಜೆಪಿ ವತಿಯಿಂದ ಸನ್ಮಾನ



ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ಕೊಪ್ಪಳದಲ್ಲಿ ಇಂದು ನಡೆದ "ಪ್ರಜಾಪ್ರಭುತ್ವ ಉಳಿಸಿ – ಅರಾಜಕತೆ ಅಳಿಸಿ" ಎಂಬ ಘೋಷವಾಕ್ಯದೊಂದಿಗೆ ನಡೆದ ಪಾದಯಾತ್ರೆಯಲ್ಲಿ ಭಾಗವಹಿಸಿದ್ದ ರಾಜ್ಯ ಬಿಜೆಪಿ ಸಹ ಉಸ್ತುವಾರಿ ಡಾ. ಕಾಸಂ ವೆಂಕಟೇಶ್ವರಲು ಅವರನ್ನು ಕುಷ್ಟಗಿ ಮಂಡಲ ಬಿಜೆಪಿ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಶಾಸಕ ದೊಡ್ಡನಗೌಡ ಎಚ್. ಪಾಟೀಲ ಮಾತನಾಡಿ, ಚುನಾವಣೆಯಲ್ಲಿ ಗೆದ್ದಾಗ ಇವಿಎಂ ಸರಿಯಿದೆ ಎಂದು ಹೇಳುವ ಕಾಂಗ್ರೆಸ್, ಸೋತಾಗ ಇವಿಎಂ ಮೇಲೆ ಆರೋಪ ಮಾಡುವುದು ಅದರ ರಾಜಕೀಯ ಚಾಳಿಯಾಗಿದೆ ಎಂದು ಟೀಕಿಸಿದರು. ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಹಣವಿಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಜನರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ಹಾಲು, ಮೊಸರು ಹಾಗೂ ಬಸ್ ಪ್ರಯಾಣ ದರ ಏರಿಕೆ ಮಾಡುವ ಮೂಲಕ ಜನಸಾಮಾನ್ಯರ ಮೇಲೆ ಆರ್ಥಿಕ ಹೊರೆ ಹಾಕಲಾಗಿದೆ. ರೈತರಿಗೆ ಬರ ಪರಿಹಾರ ನೀಡುವಲ್ಲಿಯೂ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು.

ರಾಜ್ಯದ ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಬದಲು ದೆಹಲಿಯಲ್ಲಿ ಪ್ರತಿಭಟನೆ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳನ್ನು ಜನರ ಮುಂದಿಡುವುದು ನಮ್ಮ ಸಂಕಲ್ಪವಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಬಿಜೆಪಿ ತಾಲೂಕು ಅಧ್ಯಕ್ಷ ಮಹಾಂತೇಶ ಬಾದಾಮಿ, ಕೆ. ಮಹೇಶ, ಶಶಿಧರ ಕವಲಿ, ಕಲ್ಲೇಶ ತಾಳದ, ಶರಣು ತಳ್ಳಿಕೇರಿ, ಸಂಗನಗೌಡ ಜೈನರ, ಲಾಡಸಾಬ ಕೊಳ್ಳಿ ದೇವರಾಜ ಅಜಾಳ, ಮುತ್ತು ರಾಠೋಡ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು

ಹಾಸನಾಂಬಾ ಜಾತ್ರೆಗೆ ಸೇವೆ

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಕರ್ನಾಟಕದ ಪ್ರಸಿದ್ಧ ಧಾರ್ಮಿಕ ಕ್ಷೇತ್ರಗಳಲ್ಲಿ ಹಾಸನದ ಹಾಸನಾಂಬಾ ಜಾತ್ರೆಯಲ್ಲಿ ಲಕ್ಷಾಂತರ ಭಕ್ತರು ಭಕ್ತಿ ಭಾವನೆಯಿಂದ ಭಾಗವಹಿಸುವರು ಜಾತ್ರಾ ಮಹೋತ್ಸವದಲ್ಲಿ ರೋವರ್ಸ್ ರೇಂಜರ್ಸ್ ಮುಖ್ಯ ಧ್ಯೇಯ ಸೇವೆ" ಆಗಿರುವುದರಿಂದ ದಿನಾಂಕ: 7ರಿಂದ 11 ರ ವರೆಗೆ ಹಾಸನದಲ್ಲಿ ಸಾಮಾಜಿಕ ಸೇವೆ ಮಾಡಲು.



ರಾಯಚೂರಿನ ಎಸ್‌ಆರ್.ಪಿ.ಎಸ್. ಪದವಿ ಪೂರ್ವ ಕಾಲೇಜಿನ 13 ರೇಂಜರ್ ವಿದ್ಯಾರ್ಥಿನಿಯರು ಹಾಗೂ 9 ರೋವರ್ಸ್ ವಿದ್ಯಾರ್ಥಿಗಳು ದೇವದುರ್ಗ ಸ್ಥಳೀಯ ಸಂಸ್ಥೆ ಸಹಾಯಕ ಜಿಲ್ಲಾ ಆಯುಕ್ತ ಮಲ್ಲಪ್ಪ ಕುಂಬಾರ ಹಾಗೂ ರೋವರ್ಸ್ ಸ್ಕೌಟ್ ಲೀಡರ್ ಕಿರಣ ಅವರ ನಾಯಕತ್ವದಲ್ಲಿ ಇಂದು ಸಿಂಧನೂರಿನಿಂದ ರೈಲು ಮೂಲಕ ಅರಸಿಕೇರಿ ಮಾರ್ಗವಾಗಿ ಹಾಸನಕ್ಕೆ ಪ್ರಯಾಣ ಬೆಳೆಸಿದರು ಸಿಂಧನೂರು ಸ್ಥಳೀಯ ಸಂಸ್ಥೆ ಕಾರ್ಯದರ್ಶಿ ಬೀರಪ್ಪ ಶಂಭೋಜಿ ಅವರಿಗೆ ಶುಭ ಕೋರಿ ಬೀಳ್ಕೊಟ್ಟರು.

ಹೊರ ರಾಜ್ಯದ ಭತ್ತದ ಆಮದು ಹಾವಳಿ: ಕಂಪ್ಲಿ ತಹಶೀಲ್ದಾರರಿಗೆ ರೈತ ಸಂಘದಿಂದ ಮನವಿ

ರೈತರ ಬದುಕು ಬೀದಿಗೆ

ನೈಜ್ಯ ದೆಸೆ ನ್ಯೂಸ್

ಕಂಪ್ಲಿ: ಕರ್ನಾಟಕದ ಸ್ಥಳೀಯ ಮಾರುಕಟ್ಟೆಗಳಿಗೆ ಹೊರ ರಾಜ್ಯಗಳಿಂದ ಅನಿಯಂತ್ರಿತವಾಗಿ ಮತ್ತು ಅಕ್ರಮವಾಗಿ ಭತ್ತ ಆಮದಾಗುತ್ತಿರುವುದನ್ನು ತಡೆಯಲು ವಿಫಲವಾದರೆ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಕೋಡಿಹಳ್ಳಿ ಚಂದ್ರಶೇಖರ್ ಬಣ) ಎಚ್ಚರಿಸಿದೆ.

ಶುಕ್ರವಾರ ಇಲ್ಲಿನ ತಹಶೀಲ್ದಾರರಿಗೆ ಈ ಕುರಿತು ಪ್ರಮುಖ ಹಕ್ಕೊತ್ತಾಯಗಳ ಮನವಿ ಪತ್ರ ಸಲ್ಲಿಸಿದ ರೈತ ಮುಖಂಡರು, ಸ್ಥಳೀಯ ಭತ್ತ ಬೆಳೆಗಾರರ ಹಿತರಕ್ಷಣೆ ಮಾಡುವಂತೆ ಆಗ್ರಹಿಸಿದರು.

ಮನವಿ ಸಲ್ಲಿಸಿ ಮಾತನಾಡಿದ ಸಂಘದ ರಾಜ್ಯ ಕಾರ್ಯಾಧ್ಯಕ್ಷರಾದ ಬಿ.ವಿ. ಗೌಡರು, "ರಾಜ್ಯದ ರೈತರು ಸಾಲಸೋಲ ಮಾಡಿ, ದುಬಾರಿ ಗೊಬ್ಬರ, ಕೀಟನಾಶಕ ಹಾಗೂ ಕೂಲಿ ನೀಡಿ ಕಷ್ಟಪಟ್ಟು ಭತ್ತ ಬೆಳೆದು ಮಾರುಕಟ್ಟೆಗೆ ತರುತ್ತಿದ್ದಾರೆ. ಆದರೆ ಆಂಧ್ರಪ್ರದೇಶ ಸೇರಿದಂತೆ ಹೊರ ರಾಜ್ಯಗಳಿಂದ ಭಾರಿ ಪ್ರಮಾಣದ ಭತ್ತ ಇಲ್ಲಿಗೆ ಹರಿದುಬರುತ್ತಿದೆ.



ಇದರಿಂದ ಸ್ಥಳೀಯ ಭತ್ತಕ್ಕೆ ಸೂಕ್ತ ಬೆಲೆ ಸಿಗದೆ ಮಾರುಕಟ್ಟೆಯಲ್ಲಿ ಬೆಲೆ ಕುಸಿತದ ಭೀತಿ ಎದುರಾಗಿದೆ," ಎಂದು ಆತಂಕ ವ್ಯಕ್ತಪಡಿಸಿದರು.

ತುಂಗಭದ್ರಾ ನಷ್ಟದ ಬೆನ್ನಲ್ಲೇ ಮತ್ತೊಂದು ಆಘಾತ, ಕಳೆದ ಬಾರಿ ತುಂಗಭದ್ರಾ ಜಲಾಶಯದ ಕ್ರೆಸ್ಟ್ ಗೇಟ್ ಮುರಿದುಬಿದ್ದ ಹಿನ್ನೆಲೆಯಲ್ಲಿ, ಹೊಸ ಗೇಟ್ ಅಳವಡಿಸಲು ನೀರನ್ನು ನದಿಗೆ ಹರಿಸಲಾಗಿತ್ತು. ಇದರಿಂದ ಕಂಪ್ಲಿ, ಸಿರುಗುಪ್ಪ ಹಾಗೂ ಕುರುಗೋಡು ಭಾಗದ ರೈತರು ತಮ್ಮ ಬೆಳೆಯನ್ನು ಸಂಪೂರ್ಣ ಕಳೆದುಕೊಂಡು ಈಗಾಗಲೇ ಬೀದಿಗೆ ಬಿದ್ದಿದ್ದಾರೆ. ಇಂತಹ ಸಂಕಷ್ಟದ ಸಮಯದಲ್ಲಿ ಹೊರ ರಾಜ್ಯದ ಭತ್ತದ ಆಮದು ಸ್ಥಳೀಯ ರೈತರನ್ನು ಮತ್ತಷ್ಟು ಆರ್ಥಿಕ ಸುಳಿಗೆ ಸಿಲುಕಿಸುತ್ತಿದೆ ಎಂದು ಮುಖಂಡರು ಆಕ್ರೋಶ ಹೊರಹಾಕಿದರು.

ರೈತ ಸಂಘಟನೆಯ ಪ್ರಮುಖ ಬೇಡಿಕೆಗಳು:

* ಹೊರ ರಾಜ್ಯಗಳಿಂದ ಬರುತ್ತಿರುವ ಭತ್ತದ ಸಾಗಣೆ ಮತ್ತು ಮಾರುಕಟ್ಟೆ ಮಾರಾಟದ ಮೂಲಗಳ ಬಗ್ಗೆ ಕಟ್ಟುನಿಟ್ಟಿನ ತನಿಖೆಯಾಗಬೇಕು.
* ಕಂಪ್ಲಿ ಮತ್ತು ಬಳ್ಳಾರಿ ಜಿಲ್ಲೆಯ ಖರೀದಿ ಕೇಂದ್ರಗಳಲ್ಲಿ ಸ್ಥಳೀಯ ರೈತರು ಬೆಳೆದ ಭತ್ತಕ್ಕೆ ಮೊದಲ ಆದ್ಯತೆ ನೀಡಬೇಕು.
* ಸರ್ಕಾರ ನಿಗದಿಪಡಿಸಿದ ಕನಿಷ್ಠ ಬೆಂಬಲ ಬೆಲೆ (MSP) ರೈತರಿಗೆ ಸಿಗುವಂತಾಗಬೇಕು ಹಾಗೂ ಅಕ್ರಮ ಸಾಗಣೆದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಬೇಕು.

ಕೃಷಿ, ಆಹಾರ ಮತ್ತು ಮಾರುಕಟ್ಟೆ ಇಲಾಖೆ ಅಧಿಕಾರಿಗಳ ಸಭೆ ಕರೆದು, ಸಂತ್ರಸ್ತ ರೈತರಿಗೆ ತಕ್ಷಣವೇ ವಿಶೇಷ ಪರಿಹಾರ ಘೋಷಿಸಬೇಕು. ಮನವಿ ಸ್ವೀಕರಿಸಿದ ತಹಶೀಲ್ದಾರರು, ಈ ಕುರಿತು ಕೃಷಿ ಮತ್ತು ಮಾರುಕಟ್ಟೆ ಇಲಾಖೆಯ ಉನ್ನತ ಅಧಿಕಾರಿಗಳ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲಾಧ್ಯಕ್ಷ ಶರಣಬಸಪ್ಪ, ಜಿಲ್ಲಾ ಕಾರ್ಯಾಧ್ಯಕ್ಷ ಭರಮರೆಡ್ಡಿ ಜೆ., ತಾಲ್ಲೂಕು ಅಧ್ಯಕ್ಷರಾದ ವಿ. ವೀರೇಶ (ಕಂಪ್ಲಿ), ಮಂಜುನಾಥ (ಕುರುಗೋಡು), ಕಾರ್ಯಾಧ್ಯಕ್ಷ ಕೆ. ರಮೇಶ, ಸಿರುಗುಪ್ಪದ ರೈತ ಮುಖಂಡ ರಾಘವೇಂದ್ರ ರೆಡ್ಡಿ ಹಾಗೂ ನಗರ ಘಟನಾಧ್ಯಕ್ಷ ತಿಮ್ಮಪ್ಪ ನಾಯಕ ಸೇರಿದಂತೆ ನೂರಾರು ರೈತರು ಉಪಸ್ಥಿತರಿದ್ದರು.

ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ವಿರುದ್ಧ ರಾಯಚೂರಿನಲ್ಲಿ ಕಾಂಗ್ರೆಸ್ ರಣಕಹಳೆ

'ವೋಟ್ ಬಚಾವ್, ದೇಶ್ ಬಚಾವ್' ಘೋಷದೊಂದಿಗೆ ಅಂಬೇಡ್ಕರ್ ವೃತ್ತದಲ್ಲಿ ಬೃಹತ್ ಪ್ರತಿಭಟನೆ – ಎಸ್‌ಐಆರ್ ರದ್ದತಿಗೆ ಎನ್.ಎಸ್. ಬೋಸರಾಜು ಆಗ್ರಹ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ (SIR) ಪ್ರಕ್ರಿಯೆಯನ್ನು ವಿರೋಧಿಸಿ ಕಾಂಗ್ರೆಸ್ ಪಕ್ಷದ ನೇತೃತ್ವದಲ್ಲಿ ಇಂಡಿಯಾ ಮೈತ್ರಿಕೂಟ, ದಲಿತ ಹಾಗೂ ವಿವಿಧ ಪ್ರಗತಿಪರ ಸಂಘಟನೆಗಳ ಮುಖಂಡರು ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

'ವೋಟ್ ಬಚಾವ್, ದೇಶ್ ಬಚಾವ್' (ಮತ ಉಳಿಸಿ, ದೇಶ ಉಳಿಸಿ) ಎಂಬ ಘೋಷವಾಕ್ಯದೊಂದಿಗೆ ನಡೆದ ಪ್ರತಿಭಟನೆಯಲ್ಲಿ ನೂರಾರು ಮುಖಂಡರು ಹಾಗೂ ಕಾರ್ಯಕರ್ತರು ಪಾಲ್ಗೊಂಡು ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಪ್ರಕ್ರಿಯೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ಅಣಕು ಪ್ರದರ್ಶನ ನಡೆಸಿ, ವಿವಿಧ ಘೋಷಣೆಗಳನ್ನು ಕೂಗುವ ಮೂಲಕ ಪ್ರತಿಭಟನಾಕಾರರು ಗಮನ ಸೆಳೆದರು. ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಬೇಕು ಹಾಗೂ ಯಾವುದೇ ಅರ್ಹ ಮತದಾರರ ಹೆಸರನ್ನು ಪಟ್ಟಿಯಿಂದ ಕೈಬಿಡಬಾರದು ಎಂದು ಆಗ್ರಹಿಸಿದರು.



ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನದ ಹಕ್ಕು ಅತ್ಯಂತ ಮಹತ್ವದ್ದಾಗಿದೆ. ಪ್ರತಿಯೊಬ್ಬ ಅರ್ಹ ನಾಗರಿಕನಿಗೂ ಮತದಾನದ ಅವಕಾಶ ದೊರೆಯಬೇಕು. ಮತದಾರರ ಪಟ್ಟಿ ಪರಿಷ್ಕರಣೆ ಸಂದರ್ಭದಲ್ಲಿ ಯಾವುದೇ ಗೊಂದಲ ಅಥವಾ ಲೋಪದೋಷಗಳಿಗೆ ಅವಕಾಶ ನೀಡಬಾರದು. ಜನಸಾಮಾನ್ಯರ ಮತದಾನದ ಹಕ್ಕನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಚುನಾವಣಾ ಆಯೋಗ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಎಸ್‌ಐಆರ್ ಮೂಲಕ ಮತದಾರರ ಹಕ್ಕು ಕಸಿಯುವ ಪ್ರಯತ್ನ: ಬೋಸರಾಜು ಆರೋಪ ಪ್ರತಿಭಟನೆಯಲ್ಲಿ ಮಾತನಾಡಿದ ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು, ಎಸ್‌ಐಆರ್ ಪ್ರಕ್ರಿಯೆಯ ಮೂಲಕ ಮತದಾರರ ಹಕ್ಕುಗಳನ್ನು ಕಸಿದುಕೊಳ್ಳುವ ಪ್ರಯತ್ನ ನಡೆಯುತ್ತಿದೆ. ಮುಂಬರುವ ಚುನಾವಣೆಗಳಲ್ಲಿ ಅಧಿಕಾರ ಪಡೆಯುವ ಉದ್ದೇಶದಿಂದ ಬಿಜೆಪಿ ಈ ಪ್ರಕ್ರಿಯೆಯನ್ನು ಅಸ್ತ್ರವಾಗಿ ಬಳಸಿಕೊಳ್ಳುತ್ತಿದೆ ಎಂದು ಆರೋಪಿಸಿದರು.

ದೇಶಾದ್ಯಂತ ಸುಮಾರು 13 ಕೋಟಿ ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕುವ ಪ್ರಯತ್ನ ನಡೆಯುತ್ತಿದೆ. ಕಾಂಗ್ರೆಸ್ ಪಕ್ಷ ಆರಂಭದಿಂದಲೂ ಮತಗಳ್ಳತನದ ವಿರುದ್ಧ ದೇಶಾದ್ಯಂತ ಧ್ವನಿ ಎತ್ತಿ ಹೋರಾಟ ನಡೆಸುತ್ತಿದ್ದರೂ ಚುನಾವಣಾ ಆಯೋಗ ಸೂಕ್ತವಾಗಿ ಸ್ಪಂದಿಸುತ್ತಿಲ್ಲ. ಬದಲಾಗಿ ಬಿಜೆಪಿಯ ಅಣತಿಯಂತೆ ಕಾರ್ಯನಿರ್ವಹಿಸುತ್ತಿದೆ ಎಂದು ದೂರಿದರು.

ಈಗ ಮತದಾರರು ಜಾಗೃತರಾಗಿದ್ದು, ವಿವಿಧ ಸಂಘ-ಸಂಸ್ಥೆಗಳು ಹಾಗೂ ವಿರೋಧ ಪಕ್ಷಗಳು ಹೋರಾಟಕ್ಕೆ ಕೈಜೋಡಿಸುತ್ತಿವೆ. ಜನರ ಹೋರಾಟದಿಂದ ಕೇಂದ್ರ ಸರ್ಕಾರಕ್ಕೆ ನಡುಕ ಶುರುವಾಗಿದೆ. ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು. ಸುಪ್ರೀಂ ಕೋರ್ಟ್‌ನ ಹಿರಿಯ ವಕೀಲರು ಸೇರಿದಂತೆ ವಿವಿಧ ಕ್ಷೇತ್ರಗಳ ಗಣ್ಯರು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ, ಮತಗಳ್ಳತನದ ಕುರಿತು ಬಹಿರಂಗವಾಗಿ ಧ್ವನಿ ಎತ್ತುತ್ತಿದ್ದಾರೆ ಎಂದರು.

ದೇಶದಲ್ಲಿ ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಆಶಯಗಳನ್ನು ಉಳಿಸಲು ಈ ಹೋರಾಟವನ್ನು ಮತ್ತಷ್ಟು ಬಲಪಡಿಸಬೇಕಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಬೇಕು ಹಾಗೂ ಎಸ್‌ಐಆರ್ ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು. ಈ ಬೇಡಿಕೆಗಳು ಈಡೇರುವವರೆಗೂ ಹೋರಾಟ ಮುಂದುವರಿಯಲಿದೆ ಎಂದು ಎನ್.ಎಸ್. ಬೋಸರಾಜು ಹೇಳಿದರು.

ಪ್ರತಿಭಟನೆಯಲ್ಲಿ ಕಾಂಗ್ರೆಸ್ ಮುಖಂಡರು, ಇಂಡಿಯಾ ಮೈತ್ರಿಕೂಟದ ಪ್ರತಿನಿಧಿಗಳು, ದಲಿತ ಸಂಘಟನೆಗಳು ಹಾಗೂ ವಿವಿಧ ಪ್ರಗತಿಪರ ಸಂಘಟನೆಗಳ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

ಸೂಚನೆ: ಎಸ್‌ಐಆರ್, ಬಿಜೆಪಿ ಮತ್ತು ಚುನಾವಣಾ ಆಯೋಗಕ್ಕೆ ಸಂಬಂಧಿಸಿದ ಆರೋಪಗಳು ಪ್ರತಿಭಟನೆಯಲ್ಲಿ ಎನ್.ಎಸ್. ಬೋಸರಾಜು ಅವರು ಮಾಡಿದ ಹೇಳಿಕೆಗಳಾಗಿವೆ.

ನೇಮಕಾತಿ ಪ್ರಕಟಣೆ

ಶಿವಮೊಗ್ಗ ಮಹಾನಗರ ಪಾಲಿಕೆ ನೇಮಕಾತಿ 2026 – 45 ಪೌರಕಾರ್ಮಿಕ ಹುದ್ದೆಗಳಿಗೆ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ.

ಶಿವಮೊಗ್ಗ ಮಹಾನಗರ ಪಾಲಿಕೆ ನೇಮಕಾತಿ 2026: 45 ಪೌರಕಾರ್ಮಿಕ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಶಿವಮೊಗ್ಗ ಮಹಾನಗರ ಪಾಲಿಕೆಯು ಅಕ್ಟೋಬರ್ 2026ರ ಅಧಿಕೃತ ಅಧಿಸೂಚನೆಯ ಮೂಲಕ, ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಪೌರಕಾರ್ಮಿಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿಗಳನ್ನು ಕೋರಿದೆ. ಕರ್ನಾಟಕ ಸರ್ಕಾರದ ಅಧೀನದಲ್ಲಿರುವ ಶಿವಮೊಗ್ಗ ಮಹಾನಗರ ಪಾಲಿಕೆಯಲ್ಲಿ ಉದ್ಯೋಗವನ್ನು ಹುಡುಕುತ್ತಿರುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 09–ನವೆಂಬರ್–2026 ರಂದು ಅಥ–'ವಾ ಅದಕ್ಕೂ ಮೊದಲು ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಸಂಸ್ಥೆಯ ಹೆಸರು: ಶಿವಮೊಗ್ಗ ಮಹಾನಗರ ಪಾಲಿಕೆ ಹುದ್ದೆಗಳ ಸಂಖ್ಯೆ: 45 ಉದ್ಯೋಗ ಸ್ಥಳ: ಶಿವಮೊಗ್ಗ ? ಕರ್ನಾಟಕ ಹುದ್ದೆಯ ಹೆಸರು: ಪೌರಕಾರ್ಮಿಕ ವೇತನ: ತಿಂಗಳಿಗೆ ರೂ. 27,000 ? 46,675/– ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 09–ನವೆಂಬರ್–2026. ಅಧಿಕೃತ ವೆಬ್‌ಸೈಟ್: shivamoggacitycorp.org.

ಲಿಂಗಸೂಗೂರು ತಾಲೂಕಿನಲ್ಲಿ ನಕಲಿ ವೈದ್ಯರ ಕ್ಲಿನಿಕ್ ಸೀಜ್:

ವೈದ್ಯಕೀಯ ಪದವಿ ಪಡೆಯದೆ ಕ್ಲಿನಿಕ್ ನಡೆಸುತ್ತಿದ್ದರೆ ಕೆಪಿಎಮ್‌ಇ ಕಾಯ್ದೆಯಡಿ ಕಾನೂನಾತ್ಮಕ ಕ್ರಮ: ಡಾ ನಂದಿತಾ ಎಮ್ ಎನ್

❑ ನೈಜ್ಯ ದೆಸೆ ನ್ಯೂಸ್

ರಾಯಚೂರು: ಯಾವುದೇ ವೈದ್ಯ ಪದವಿ ಪಡೆಯದೆ ಜನತೆಗೆ ತಾವು ವೈದ್ಯರೆಂದು ಬಿಂಬಿಸಿ ಚಿಕಿತ್ಸೆ ನೀಡುವ ನಕಲಿ ವೈದ್ಯರ ವಿರುದ್ಧ ಕೆಪಿಎಮ್‌ಇ ಕಾಯ್ದೆಯಡಿ ಕಾನೂನಾತ್ಮಕ ಕ್ರಮ ಜರುಗಿಸಿ ಎಫ್‌ಐಆರ್ ದಾಖಲಿಸಲಾಗುವುದು ಎಂದು ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ನಂದಿತಾ ಎಮ್ ಎನ್ ತಿಳಿಸಿದ್ದಾರೆ.

ಇತ್ತೀಚಿಗೆ ಲಿಂಗಸೂಗೂರು ತಾಲೂಕಿನ ಆನೆಹೊಸುರು ಗ್ರಾಮದಲ್ಲಿ ಮನೆಯಲ್ಲಿಯೇ ಕ್ಲಿನಿಕ್ ಮಾಡಿಕೊಂಡು ಜನ–ರಿಗೆ ತಾವು ವೈದ್ಯ ಪದವಿ ಪಡೆದ ವೈದ್ಯರೆಂದು ಬಿಂಬಿಸಿ ಚಿಕಿತ್ಸೆ ನೀಡುತ್ತಿದ್ದ ನಕಲಿ ವೈದ್ಯರ ಕ್ಲಿನಿಕ್ ಸೀಜ್ ಮಾಡಿ ಕೆಪಿಎಮ್‌ಇ ಕಾಯ್ದೆಯಡಿ ಕಾನೂನಾತ್ಮಕ ಕ್ರಮ ಜರುಗಿಸಲು ಕೆಪಿಎಮ್‌ಇ ಕಾಯ್ದೆಯ ಜಿಲ್ಲಾ ಸಕ್ಷಮ ಪ್ರಾಧಿಕಾರಗಳು




ಹಾಗೂ ಜಿಲ್ಲಾಧಿಕಾರಿಗಳು ರವರಿಗೆ ವರದಿ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಸಾರ್ವಜನಿಕರಲ್ಲಿ ಮನವಿ: ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಯಾವುದೇ ವೈದ್ಯ ಪದವಿ ಪಡೆಯದೆ ಗ್ರಾಮೀಣ ಭಾಗದಲ್ಲಿ ಜನರಿಗೆ ವೈದ್ಯರೆಂದು ಬಿಂಬಿಸುವ ನಕಲಿ ವೈದ್ಯರ ಕ್ಲಿನಿಕ್‌ಗಳ ಮೇಲೆ ನಿರಂತರವಾಗಿ ದಾಳಿ ಮಾಡಲಾಗುವುದು. ನಕಲಿ ವೈದ್ಯರು ಸಾಮಾನ್ಯವಾಗಿ ಅರ್ಧಕ್ಕೆ ವಿದ್ಯಾಭ್ಯಾಸ ಬಿಟ್ಟವರು, ಇಲ್ಲವೇ ಖಾಸಗಿ ನರ್ಸಿಂಗ್ ಹೋಮ್, ಖಾಸಗಿ ಅಸ್ಪತ್ರೆ, ಕ್ಲಿನಿಕ್‌ಗಳಲ್ಲಿ ಸ್ವಚ್ಚತಾ ಕೆಲಸ, ಗಾಯಕ್ಕೆ ಪಟ್ಟಿ ಕಟ್ಟುವುದು ದಂತಹ ಸಣ್ಣಪುಟ್ಟ ಕೆಲಸ ಮಾಡಿ ನಂತರದಲ್ಲಿ ಕೆಲಸ ಬಿಟ್ಟು ತಾವೇ ವೈದ್ಯರೆಂದು ಚಿಕಿತ್ಸೆ ನೀಡುವವರು ಕಂಡು ಬರುತ್ತಿದ್ದು, ಇಂದು ಅತ್ಯಂತ ಗಂಭಿರವಾಗಿದ್ದಾಗಿದೆ. ದಯವಿಟ್ಟು ಸಾರ್ವಜನಿಕರು ತಾವು ಚಿಕಿತ್ಸೆಗೆ ತೆರಳುವ ಪೂರ್ವದಲ್ಲಿ ಚಿಕಿತ್ಸೆ ನೀಡುವ ವೈದ್ಯರು ವೈದ್ಯಕೀಯ ಪದವಿ ಪಡೆದಿರುವ ಬಗ್ಗೆ ವಿಚಾರಿಸಿ ಚಿಕಿತ್ಸೆ ಪಡೆಯಲು ಹಾಗೂ ಯಾರಾದರೂ ನಕಲಿ ವೈದ್ಯರು ಕ್ಲಿನಿಕ್ ನಡೆಸುತ್ತಿದ್ದರೆ ಮಾಹಿತಿ ನೀಡಲು ಮನವಿ ಮಾಡಿದ್ದಾರೆ. ಅಲ್ಲದೆ ಚಿಕಿತ್ಸೆಗಾಗಿ ಸರಕಾರಿ ಆಸ್ಪತ್ರೆಗಳು ಅಥ–'ವಾ ಅಧಿಕೃತ ವೈದ್ಯ ಪದವಿ ಪಡೆದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ವಿನಂತಿಸಿದ್ದಾರೆ. ಈ ಸಂದರ್ಭದಲ್ಲಿ ಲಿಂಗಸುಗೂರ ತಾಲೂಕಾ ಆರೋಗ್ಯಾಧಿಕಾರಿ ಡಾ ಹನುಮಂತರಾಯ ತಳ್ಳಳ್ಳಿ, ಹಾಗೂ ಇತರರು ಉಪಸ್ಥಿತರಿದ್ದರು.

ಸುಳ್ಳು ಸುದ್ದಿ ಮಾಡುವವರ ವಿರುದ್ಧ ಕ್ರಮಕೈಗೊಳ್ಳಿ

❑ ನೈಜ್ಯ ದೆಸೆ ನ್ಯೂಸ್

ದೇವದುರ್ಗ: ಪಟ್ಟಣದ ಸರ್ಕಾರಿ ನೌಕರರ ಸಂಘದ ತಾಲೂಕು ಜಂಟಿ ಕಾರ್ಯದರ್ಶಿ ಅಭಿಷೇಕ್ ಹುಡೇದ್‌ಗೆ ಸುಳ್ಳು ಸುದ್ದಿ ಪ್ರಕಟಿಸಿ ಮಾನ ಹಾನಿ ಮಾಡಿದ ಸ್ಥಳೀಯ ಪತ್ರಿಕೆ ಹಾಗೂ ಪತ್ರಕರ್ತನ ವಿರುದ್ಧ ಕ್ರಮ ಜರುಗಿಸುವಂತೆ ಒತ್ತಾಯಿಸಿ ತಹಸೀಲ್ದಾರ್ ನಾಗಮ್ಮ ಕಟ್ಟಿಮನಿಗೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಶುಕ್ರವಾರ ಮನವಿ ಸಲ್ಲಿಸಿದರು.



ಸ್ಥಳೀಯ ಪತ್ರಿಕೆಯ ವರದಿಗಾರ ಸರ್ಕಾರಿ ನೌಕರರಿಗೆ ಸುದ್ದಿ ಬರೆಯುವುದಾಗಿ ನಿತ್ಯ ಕಿರುಕುಳ ನೀಡುತ್ತಿದ್ದಾನೆ. ಸರ್ಕಾರಿ ನೌಕರ ಅಭಿಷೇಕ ವಿರುದ್ಧ ಸುಳ್ಳು ಸುದ್ದಿ ಪ್ರಕಟಿಸಿದ್ದು, ಯಾವುದೇ ಆಧಾರ, ದಾಖಲೆ ಇಲ್ಲದೆ ಮಾನ ಹರಾಜು ಹಾಕುತ್ತಿದ್ದಾನೆ. ಅಲ್ಲದೆ ಪದೇ ಪದೇ ಆರ್‌ಟಿಐ ನಲ್ಲಿ ಅರ್ಜಿ ಸಲ್ಲಿಸಿ ಬೆದರಿಕೆ ಹಾಕುತ್ತಿದ್ದಾನೆ. ಜತೆಗೆ ಕೆಲವು ನೌಕರರಿಗೆ ಹಣಕ್ಕೆ ಬೇಡಿಕೆ ಇಡುತ್ತಿದ್ದಾನೆ. ಇದ–ರಿಂದ ಸರ್ಕಾರಿ ನೌಕರರು ನಿರ್ಭೀತಿಯಿಂದ ಕೆಲಸ ಮಾಡದಂಥ ವಾತಾವರಣ ನಿರ್ಮಾಣವಾಗಿದೆ ಎಂದು ಆರೋಪಿಸಿದರು. ಕೂಡಲೇ ಸುಳ್ಳು ಸುದ್ದಿ ಪ್ರಕಟಿಸಿದ ಜಲಬಲ ಟೈಮ್ಸ್ ಸ್ಥಳೀಯ ಪತ್ರಿಕೆ ಹಾಗೂ ವರದಿಗಾರನ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ಪದೇ ಪದೇ ಅನಗತ್ಯ ಆರ್‌ಟಿಐ ಅರ್ಜಿ ಸಲ್ಲಿಸಿ ಕಿರುಕುಳ ನೀಡುತ್ತಿರುವ ನಕಲಿ ಪತ್ರಕರ್ತರ ವಿರುದ್ಧ ಕ್ರಮ ಜರುಗಿಸಬೇಕು. ಕಚೇರಿ ಕೆಲಸದ ಸಮಯದಲ್ಲಿ ಕಿರುಕುಳ ನೀಡುವುದನ್ನು ತಪ್ಪಿಸಬೇಕು. ಈ ಬಗ್ಗೆ ಪೊಲೀಸ್ ಹಾಗೂ ಮೇಲಾಧಿಕಾರಿಗಳಿಗೆ ಕ್ರಮಕ್ಕೆ ಶಿಫಾರಸ್ಸು ಮಾಡಬೇಕು. ನಿರ್ಲಕ್ಷ್ಯ ಮಾಡಿದರೆ ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು. ನೌಕರರ ಸಂಘದ ತಾಲೂಕು ಅಧ್ಯಕ್ಷ ಹನುಮಂತ್ರಾಯ ಶಾಖೆ, ಗ್ರೇಡ್–2 ತಹಸೀಲ್ದಾರ್ ಭೀಮರಾಯ ಮೇಟಿ, ತಾಲೂಕು ಕಾರ್ಯದರ್ಶಿ ಮಹಾದೇವಪ್ಪ ಪಾಟೀಲ್, ಭೀಮನಗೌಡ ಪಾಟೀಲ್, ಅಭಿಷೇಕ ಹುಡೇದ್, ಪ್ರವೀಣ್‌ಕುಮಾರ್ ಯಡ್ರಾಮಿ, ಪ್ರಕಾಶ ಇತರರಿದ್ದರು.

ಕನ್ನಡ ಭಾಷೆಗೆ 8 ಜ್ಞಾನಪೀಠ ಪ್ರಶಸ್ತಿಗಳು ಲಭಿಸಿರುವುದು ಹೆಮ್ಮೆಯ ಸಂಗತಿ: ಶಾಸಕ ಜಿ. ಹಂಪಯ್ಯ ನಾಯಕ

ಬಲ್ಲಟಗಿ ಶ್ರೀ ಬಸವೇಶ್ವರ ಶಾಲೆಯಿಂದ ಅದ್ದೂರಿ ಕನ್ನಡ ರಾಜ್ಯೋತ್ಸವ ಆಚರಣೆ: ಭುವನೇಶ್ವರಿ ಭಾವಚಿತ್ರ ಮೆರವಣಿಗೆಯಲ್ಲಿ ಶಾಸಕರ ಭಾಗಿ

❑ ನೈಜ್ಯ ದೆಸೆ ನ್ಯೂಸ್

ಸಿರವಾರ: ದೇಶದ ಭಾಷೆಗಳಲ್ಲಿ ಕನ್ನಡ ಭಾಷೆಗೆ ಎಂಟು ಜ್ಞಾನಪೀಠ ಪ್ರಶಸ್ತಿಗಳು ಲಭಿಸಿರುವುದು ಹೆಮ್ಮೆಯ ಸಂಗತಿಯಾಗಿದೆ. ಸುಮಾರು ಎರಡು ಸಾವಿರ ವರ್ಷಗಳ ಇತಿಹಾಸ ಮತ್ತು ಶ್ರೀಮಂತ ಸಾಹಿತ್ಯ ಪರಂಪರೆಯನ್ನು ಹೊಂದಿರುವ ಕನ್ನಡ ಭಾಷೆ ಅತ್ಯಂತ ಶ್ರೀಮಂತ ಭಾಷೆಯಾಗಿದೆ ಎಂದು ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕ ಜಿ. ಹಂಪಯ್ಯ ನಾಯಕ ಸಾಹುಕಾರ್ ಹೇಳಿದರು.

ತಾಲೂಕಿನ ಶಾಸಕರ ಸ್ವಗ್ರಾಮವಾದ ಬಲ್ಲಟಗಿಯ ಶ್ರೀ ಬಸವೇಶ್ವರ ಪ್ರಾಥಮಿಕ ಹಾಗೂ ಪ್ರೌಢ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ಆಯೋಜಿಸಿದ್ದ ಭುವನೇಶ್ವರಿ ಭಾವಚಿತ್ರದ ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಕನ್ನಡವು ಭಾರತದ ಪ್ರಾಚೀನ ದ್ರಾವಿಡ ಭಾಷೆಗಳಲ್ಲಿ ಒಂದಾಗಿದ್ದು, ಸುಮಾರು ಎರಡು ಸಾವಿರ ವರ್ಷಗಳ ಐತಿಹಾಸಿಕ ಪರಂಪರೆಯನ್ನು ಹೊಂದಿದೆ. ಆಲೂರು ವೆಂಕಟರಾವ್





ಅವರು 1905ರಲ್ಲಿ ಕರ್ನಾಟಕ ಏಕೀಕರಣ ಚಳವಳಿಯ ಮೂಲಕ ನಾಡಿನ ಜನರಲ್ಲಿ ಕನ್ನಡದ ಪ್ರಜ್ಞೆಯನ್ನು ಜಾಗೃತಗೊಳಿಸಿದರು. 1956ರಲ್ಲಿ ಮೈಸೂರು ರಾಜ್ಯ ರಚನೆಯಾಯಿತು. ನಂತರ 1973ರ ನವೆಂಬರ್ 1ರಂದು ಅಂದಿನ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ ಅರಸು ಅವರು ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಅಧಿಕೃತವಾಗಿ ಮರುನಾಮಕರಣ ಮಾಡಿದರು ಎಂದು ಕನ್ನಡ ಭಾಷೆಯ ಇತಿಹಾಸವನ್ನು ಸ್ಮರಿಸಿದರು. ಶಾಲೆಯಿಂದ ಆರಂಭವಾದ ಭುವನೇಶ್ವರಿ ಭಾವಚಿತ್ರದ ಮೆರವಣಿಗೆಯು ವಾಲ್ಮೀಕಿ ವೃತ್ತ ಸೇರಿದಂತೆ ಪಟ್ಟಣದ ವಿವಿಧ ವೃತ್ತಗಳ ಮೂಲಕ ಸಂಚರಿಸಿ ಮರಳಿ ಶಾಲೆಗೆ ಆಗಮಿಸಿ ಮುಕ್ತಾಯಗೊಂಡಿತು. ಮೆರವಣಿಗೆಯಲ್ಲಿ ವಿದ್ಯಾರ್ಥಿಗಳು ಕನ್ನಡ ನಾಡು–ನುಡಿಯ ಮಹತ್ವ ಸಾರುವ ವಿವಿಧ ವೇಷಭೂಷಣಗಳನ್ನು ಧರಿಸಿ ಗಮನ ಸೆಳೆದರು.


ಈ ಸಂದರ್ಭದಲ್ಲಿ ಪಿ. ಶಂಕರಗೌಡ, ಮಲ್ಲಿಕಾರ್ಜುನ ಪಾಟೀಲ್, ವೆಂಕನಗೌಡ, ಶಾಲೆಯ ಅಧ್ಯಕ್ಷ ಪಿ. ಚಂದ್ರಶೇಖರ, ಆರ್. ಶರಣಗೌಡ, ಶಿವಶರಣಗೌಡ, ಮುದಪ್ಪ ಸಾಹುಕಾರ, ಬಸವಗೌಡ ಕೊಡೆಕಲ್, ಪಿ. ಬಸವಗೌಡ ಸೇರಿದಂತೆ ಗ್ರಾಮದ ಮುಖಂಡರು, ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ರಸ್ತೆಯುದ್ದಕ್ಕೂ ಧೂಳಿನ ಆರ್ಭಟ, ಗುಂಡಿಗಳಿಂದ ಸಂಚಾರ ದುಸ್ತರ; ದ್ವಿಚಕ್ರ ವಾಹನ ಸವಾರರು, ಶಾಲಾ ಮಕ್ಕಳು ಹಾಗೂ ಸಾರ್ವಜನಿಕರು ತೀವ್ರ ತೊಂದರೆಗೆ ಸಿಲುಕುವಂತಾಗಿದೆ.

❑ ನೈಜ್ಯ ದೆಸೆ ನ್ಯೂಸ್


ಬಳಗಾನೂರು: ಪಟ್ಟಣದ ಪ್ರಮುಖ ರಸ್ತೆ ಮಸ್ಕಿ ಹಾಗೂ ಸಿಂಧನೂರು ತೆರಳುವ ಮಾರ್ಗ ಸಂಪೂರ್ಣ ಹದಗೆಟ್ಟು, ಸಾರ್ವಜನಿಕರ ಸಂಚಾರಕ್ಕೆ ತೀವ್ರ ತೊಂದರೆಯಾಗಿ ಪರಿಣಮಿಸಿದೆ. ಹಾಗೂ ಮಧ್ಯದಲ್ಲಿ ಬಸವೇಶ್ವರ ಶಾಲೆ ಇದೆ ಶಾಲೆಗೆ ದಿನಾಲು ತೆರಳುವ ವಿದ್ಯಾರ್ಥಿಗಳಿಗೂ ಧೂಳಿನಿಂದ ತೊಂದರೆಯಾಗುತ್ತಿದೆ.ಇದೆ ರಸ್ತೆ ಎಲ್ಲೆಂದರಲ್ಲಿ ಹಾಳಾಗಿದ್ದು, ವಾಹನ ಸವಾರರು ಪ್ರತಿದಿನ ಜೀವ ಕೈಯಲ್ಲಿ ಹಿಡಿದುಕೊಂಡು ಸಂಚರಿಸುವಂತಹ ದುಸ್ಥಿತಿ ನಿರ್ಮಾಣವಾಗಿದೆ.

ಈ ರಸ್ತೆಯಲ್ಲಿ ಸಂಚರಿಸುವುದು ದಿನದಿಂದ ದಿನಕ್ಕೆ ಅಪಾಯಕಾರಿಯಾಗಿ ಪರಿಣಮಿಸುತ್ತಿದ್ದರೂ ಸಂಬಂಧಪಟ್ಟ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಮಾತ್ರ ಈ ಸಮಸ್ಯೆಯತ್ತ ಗಮನಹರಿಸದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.ವಿಪರ್ಯಾಸವೆಂದರೆ, ಇದೇ ರಸ್ತೆಯಲ್ಲಿ ಪಟ್ಟಣ ಪಂಚಾಯಿತಿಯ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಪ್ರತಿದಿನ ಓಡಾಡುತ್ತಿದ್ದರೂ ರಸ್ತೆಯ ದುಸ್ಥಿತಿ ಅವರ ಗಮನಕ್ಕೆ ಬರುತ್ತಿಲ್ಲವೇ ಎಂಬ ಪ್ರಶ್ನೆ ಸಾರ್ವಜನಿಕರಲ್ಲಿ ಮೂಡಿದೆ. ರಸ್ತೆ ಹದಗೆಟ್ಟಿರುವ ಬಗ್ಗೆ ಹಲವು ಬಾರಿ ಸಂಬಂಧಪಟ್ಟವರ ಗಮನಕ್ಕೆ ತಂದರೂ ಇದುವರೆಗೂ ಯಾವುದೇ ಶಾಶ್ವತ ಕ್ರಮ ಕೈಗೊಂಡಿಲ್ಲ ಎಂಬುದು ಸ್ಥಳೀಯರ ಅಳಲಾಗಿದೆ.ರಸ್ತೆಯ ಮೇಲೆ ಎಲ್ಲೆಂದರಲ್ಲಿ



ಗುಂಡಿಗಳು ನಿರ್ಮಾಣವಾಗಿದ್ದು, ಧೂಳು ಆವರಿಸಿಕೊಂಡಿರುವುದರಿಂದ ರಸ್ತೆಯೇ ಸರಿಯಾಗಿ ಕಾಣದಂತಹ ಪರಿಸ್ಥಿತಿ ಇದೆ. ವಿಶೇಷವಾಗಿ ದ್ವಿಚಕ್ರ ವಾಹನ ಸವಾರರು ಈ ರಸ್ತೆಯಲ್ಲಿ ಸಂಚರಿಸುವಾಗ ವಾಹನದ ನಿಯಂತ್ರಣ ತಪ್ಪಿ ಅಪಘಾತಕ್ಕೀಡಾಗುವ ಭೀತಿ ಎದುರಿಸುತ್ತಿದ್ದಾರೆ. ಈಗಾಗಲೇ ಈ ರಸ್ತೆಯಲ್ಲಿ ಸಂಚರಿಸುವ ಸಂದರ್ಭದಲ್ಲಿ ಅನೇಕರು ಅಪಘಾತಗಳಿಗೆ ತುತ್ತಾಗಿರುವ ಆತಂಕಕಾರಿ ಬೆಳವಣಿಗೆಗಳೂ ಕಂಡುಬಂದಿವೆ.

ರಾತ್ರಿ ವೇಳೆಯಲ್ಲಿ ರಸ್ತೆ ಸರಿಯಾಗಿ ಕಾಣಿಸದಿರುವುದರಿಂದ ಅಪಾಯದ ಸಾಧ್ಯತೆ ಮತ್ತಷ್ಟು ಹೆಚ್ಚಾಗಿದೆ.ಇನ್ನೊಂದೆಡೆ, ವಾಹನಗಳು ಸಂಚರಿಸುವಾಗ ಏಳುವ ಧೂಳು ರಸ್ತೆಯ ಅಕ್ಕಪಕ್ಕದ ಮನೆಗಳಿಗೆ ಹಾಗೂ ಸಾರ್ವಜನಿಕ–ರಿಗೆ ದೊಡ್ಡ ಸಮಸ್ಯೆಯಾಗಿದೆ. ಪ್ರತಿದಿನ ಈ ರಸ್ತೆಯಲ್ಲಿ ಸಂಚರಿಸುವ ಪ್ರಯಾಣಿಕರ ಕಣ್ಣುಗಳಿಗೆ ಧೂಳು ಬೀಳುತ್ತಿದ್ದು, ಉಸಿರಾಟದ ತೊಂದರೆ ಸೇರಿದಂತೆ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಆತಂಕ ಎದುರಾಗಿದೆ. ವಿಶೇಷವಾಗಿ ಶಾಲಾ ಮಕ್ಕಳು, ವೃದ್ಧರು ಹಾಗೂ ಮಹಿಳೆಯರು ಧೂಳಿನ ಸಮಸ್ಯೆಯಿಂದ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಮಕ್ಕಳ



ಆರೋಗ್ಯದ ಮೇಲೂ ಧೂಳಿನ ಪರಿಣಾಮ ಬೀರುವ ಸಾಧ್ಯತೆ ಇರುವುದರಿಂದ ಪೋಷಕರು ಆತಂಕ ವ್ಯಕ್ತಪಡಿಸುತ್ತಿದ್ದಾರೆ.ಸಾರ್ವಜನಿಕರ ಅನುಕೂಲಕ್ಕಾಗಿ ನಿರ್ಮಾಣವಾಗಬೇಕಾದ ರಸ್ತೆ ಇಂದು ಸಾರ್ವಜನಿಕರ ಪಾಲಿಗೆ ಸಂಕಷ್ಟದ ರಸ್ತೆಯಾಗಿ ಮಾರ್ಪಟ್ಟಿದೆ.

ರಸ್ತೆ ಅಭಿವೃದ್ಧಿ ಹಾಗೂ ನಿರ್ವಹಣೆ ಪಟ್ಟಣ ಪಂಚಾಯಿತಿಯ ಪ್ರಮುಖ ಜವಾಬ್ದಾ–ರಿಯಾಗಿದ್ದರೂ, ಇಂತಹ ಗಂಭೀರ ಸಮಸ್ಯೆಯ ಬಗ್ಗೆ ನಿರ್ಲಕ್ಷ್ಯ ವಹಿಸುತ್ತಿರುವುದು ಸರಿಯಲ್ಲ. ಪ್ರತಿದಿನ ನೂರಾರು ಜನರು ಸಂಚ–ರಿಸುವ ರಸ್ತೆಯ ದುಸ್ಥಿತಿಯನ್ನು ಅಧಿಕಾ–ರಿಗಳು ಹಾಗೂ ಜನಪ್ರತಿನಿಧಿಗಳು ಸ್ವತಃ ಪರಿಶೀಲಿಸಿ ಸಮಸ್ಯೆಯ ಗಂಭೀರತೆಯನ್ನು ಅರಿತುಕೊಳ್ಳಬೇಕಿದೆ.ಸಂಬಂಧಪಟ್ಟ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು, ಎಂಜಿನಿಯರ್‌ಗಳು ಹಾಗೂ ವಾರ್ಡ್‌ನ ಜನಪ್ರತಿನಿಧಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ರಸ್ತೆಯ ಸ್ಥಿತಿಗತಿಯನ್ನು ಪರಿಶೀಲಿಸಬೇಕು. ಕೇವಲ ತಾತ್ಕಾಲಿಕವಾಗಿ ಗುಂಡಿಗಳನ್ನು ಮುಚ್ಚುವ ಕೆಲಸ ಮಾಡದೆ, ರಸ್ತೆಯನ್ನು ಸಂಪೂರ್ಣವಾಗಿ ದುರಸ್ತಿಗೊಳಿಸಿ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು. ಕಾಮಗಾರಿ ಪೂರ್ಣಗೊಳ್ಳುವವರೆಗೆ ಧೂಳಿನ ಸಮಸ್ಯೆ ನಿಯಂತ್ರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು.

ಸಾರ್ವಜನಿಕರ ಸುರಕ್ಷತೆ ಹಾಗೂ ಮಕ್ಕಳ ಆರೋಗ್ಯದ ದೃಷ್ಟಿಯಿಂದ ಈ ಸಮಸ್ಯೆಯನ್ನು ಮತ್ತಷ್ಟು ದಿನ ಮುಂದೂಡದೆ ತುರ್ತಾಗಿ ಪರಿಹರಿಸಬೇಕಾಗಿದೆ. ಜನರು ಹಲವು ಬಾರಿ ಮನವಿ ಮಾಡಿದರೂ ಸ್ಪಂದನೆ ದೊರೆಯದಿರುವುದು ಬೇಸರದ ಸಂಗತಿಯಾಗಿದೆ. ರಸ್ತೆ ದುರಸ್ತಿಗಾಗಿ ಯಾರಾದರೂ ಅಪಘಾತಕ್ಕೀಡಾಗುವವರೆಗೆ ಅಧಿಕಾ–ರಿಗಳು ಕಾಯಬೇಕೇ? ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವುದು ಅಧಿಕಾರಿಗಳ ಹಾಗೂ ಜನಪ್ರತಿನಿಧಿಗಳ ಕರ್ತವ್ಯವಲ್ಲವೇ? ಎಂಬ ಪ್ರಶ್ನೆ ಇದೀಗ ಬಳಗಾನೂ–ರಿನ ಸಾರ್ವಜನಿಕರಿಂದ ಕೇಳಿಬರುತ್ತಿದೆ. ಆದ್ದರಿಂದ ಬಳಗಾನೂರು ಪಟ್ಟಣ ಪಂಚಾಯಿತಿ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಆದಷ್ಟು ಬೇಗ ರಸ್ತೆ ದುರಸ್ತಿ ಕಾರ್ಯ ಕೈಗೊಂಡು ಸಾರ್ವಜನಿಕರಿಗೆ ಸುರಕ್ಷಿತ ಸಂಚಾರದ ವ್ಯವಸ್ಥೆ ಕಲ್ಪಿಸಬೇಕೆಂದು ಸ್ಥಳೀಯ ಸಾರ್ವಜನಿಕರು ಒತ್ತಾಯಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ದಲಿತರ ಮೇಲಿನ ಹಲ್ಲೆ ಖಂಡಿಸಿ ನ.8ರಂದು 'ತಿಡಿಗೋಳ ಚಲೋ' ಬೈಕ್ ರ್‍ಯಾಲಿ

❑ ನೈಜ್ಯ ದೆಸೆ ನ್ಯೂಸ್

ರಾಯಚೂರು: ಸಿಂಧನೂರು ತಾಲೂಕಿನ ತಿಡಿಗೋಳ ಗ್ರಾಮದಲ್ಲಿ ದಲಿತರ ಮೇಲೆ ನಡೆದ ಸಾಮೂಹಿಕ ಹಲ್ಲೆ ಹಾಗೂ ಜಾತಿ ನಿಂದನೆ ಪ್ರಕರಣವನ್ನು ಖಂಡಿಸಿ, ಸಂತ್ರಸ್ತರಿಗೆ ನೈತಿಕ ಬೆಂಬಲ ಸೂಚಿಸುವ ಉದ್ದೇಶದಿಂದ ನವೆಂಬರ್ 8ರಂದು 'ತಿಡಿಗೋಳ ಚಲೋ' ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ದಲಿತ ಮತ್ತು ಪ್ರಗತಿಪರ ಸಂಘಟನೆಗಳ ಒಕ್ಕೂಟದ ಸಂಚಾಲಕ ಎಸ್. ಮಾರೆಪ್ಪ ತಿಳಿಸಿದರು.

ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಕ್ಟೋಬರ್ 18ರಂದು ತಿಡಿಗೋಳ ಗ್ರಾಮದಲ್ಲಿ ನಡೆದ ಆಂಜನೇಯ ಸ್ವಾಮಿ ಜಾತ್ರೆಯಲ್ಲಿ ಪಾಲ್ಗೊಂಡಿದ್ದ ಪರಿಶಿಷ್ಟ ಜಾತಿಯ ಯುವಕರ ಮೇಲೆ ಸವರ್ಣೀಯರ ತಂಡ ಹಲ್ಲೆ ನಡೆಸಿ, ಜಾತಿ ನಿಂದನೆ ಮಾಡಿದೆ. ಈ ಘಟನೆ ನಡೆದು ಹಲವು ದಿನಗಳು ಕಳೆದಿದ್ದರೂ ಪ್ರಕರಣದ ಎಲ್ಲ ಆರೋಪಿಗಳನ್ನು ಬಂಧಿಸಿಲ್ಲ. ಇದರಿಂದ ಸಂತ್ರಸ್ತ ಕುಟುಂಬಗಳು ಹಾಗೂ



ದಲಿತ ಸಮುದಾಯದ ಜನರಲ್ಲಿ ಆತಂಕ ಮುಂದುವರಿದಿದೆ ಎಂದು ಆರೋಪಿಸಿದರು.

ಗ್ರಾಮದಲ್ಲಿ ಭಯದ ವಾತಾವರಣ ನಿರ್ಮಾಣವಾಗಿದ್ದು, ಸಂತ್ರಸ್ತರಿಗೆ ನ್ಯಾಯ ಮತ್ತು ಭದ್ರತೆಯ ಭರವಸೆ ನೀಡಬೇಕಾದ ಅಗತ್ಯವಿದೆ. ದೌರ್ಜನ್ಯಕ್ಕೊಳಗಾದ ಕುಟುಂಬಗಳ ನೋವಿಗೆ ಸ್ಪಂದಿಸುವುದು ಹಾಗೂ ಅವರ ಹೋರಾಟಕ್ಕೆ ನೈತಿ–ಕ ಬೆಂಬಲ ನೀಡುವುದು ನಮ್ಮೆಲ್ಲರ ಜವಾಬ್ದಾ–ರಿಯಾಗಿದೆ. ಈ ಹಿನ್ನೆಲೆಯಲ್ಲಿ ದಲಿತ ಮತ್ತು ಪ್ರಗತಿಪರ ಸಂಘಟನೆಗಳ ಒಕ್ಕೂಟದ ವತಿಯಿಂದ ಬೈಕ್ ರ್‍ಯಾಲಿ ಆಯೋಜಿಸಲಾಗಿದೆ ಎಂದರು.

ಅನುಮತಿ ನಿರಾಕರಿಸಿದರೂ ಹೋರಾಟ ನಿಲ್ಲದು

'ತಿಡಿಗೋಳ ಚಲೋ' ಬೈಕ್ ರ?ಯಾಲಿಗೆ ಸಿಂಧನೂರು ಡಿವೈಎಸ್ಪಿ ಚಂದ್ರಶೇಖರ್ ಅವರು ಅನುಮತಿ ನಿರಾಕರಿಸಿದ್ದಾರೆ. ಆದರೂ ದಲಿತರ ಮೇಲಿನ ದೌರ್ಜನ್ಯದ ವಿರುದ್ಧ ಹೋರಾಟ ನಡೆಸಲಾಗುವುದು. ಸಂತ್ರಸ್ತರಿಗೆ ನ್ಯಾಯ ದೊರೆಯಬೇಕು ಎಂಬುದು ನಮ್ಮ ಮುಖ್ಯ ಉದ್ದೇಶವಾಗಿದ್ದು, ಈ ವಿಚಾರದಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ದಲಿತರ ಮೇಲಿನ ಹಲ್ಲೆ ಪ್ರಕರಣದಲ್ಲಿ ಆರೋಪಿಗಳ ಬಂಧನ ವಿಳಂಬವಾಗುತ್ತಿರುವುದು ಹಲವು ಪ್ರಶ್ನೆಗಳಿಗೆ ಕಾರಣವಾಗಿದೆ. ಕಾನೂನು ಎಲ್ಲ–ರಿಗೂ ಸಮಾನವಾಗಿದ್ದು, ದೌರ್ಜನ್ಯ ಎಸಗಿದವರ ವಿರುದ್ಧ ಯಾವುದೇ ಒತ್ತಡ ಅಥವಾ ಪ್ರಭಾವಕ್ಕೆ ಮಣಿಯದೆ ಕಾನೂನು ಕ್ರಮ ಜರುಗಿಸಬೇಕು. ಸಂತ್ರಸ್ತರಿಗೆ ನ್ಯಾಯ ದೊರೆಯುವಂತೆ ಪೊಲೀಸ್ ಇಲಾಖೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಶಾಸಕರ ವಿರುದ್ಧ ಅಸಮಾಧಾನ

ಘಟನೆ ನಡೆದು ಹಲವು ದಿನಗಳಾದರೂ ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ ಹಾಗೂ ಮಸ್ಕಿ ಶಾಸಕ ಬಸನಗೌಡ ತುರ್ವಿಹಾಳ ಅವರು ಸಂತ್ರಸ್ತರನ್ನು ಭೇಟಿ ಮಾಡಿ ಸಾಂತ್ವನ ಹೇಳಿಲ್ಲ. ಜನಪ್ರತಿನಿಧಿಗಳು ಸಂಕಷ್ಟದಲ್ಲಿರುವ ಜನರ ಪರವಾಗಿ ನಿಲ್ಲಬೇಕಾದ ಸಂದರ್ಭದಲ್ಲಿ ಮೌನ ವಹಿಸಿರುವುದು ಖಂಡನೀಯ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ದಲಿತರ ಮೇಲಿನ ದೌರ್ಜನ್ಯ, ಜಾತಿ ನಿಂದನೆ ಹಾಗೂ ಸಾಮಾಜಿಕ ಬಹಿಷ್ಕಾರದಂತಹ ಘಟನೆಗಳು ಸಮಾಜದ ಸಾಮರಸ್ಯಕ್ಕೆ ಧಕ್ಕೆ ತರುತ್ತವೆ. ಇಂತಹ ಘಟನೆಗಳನ್ನು ಗಂಭೀರವಾಗಿ ಪರಿಗಣಿಸಿ ಸಂತ್ರಸ್ತರಿಗೆ ನ್ಯಾಯ ಒದಗಿಸುವುದು ಆಡಳಿತ ವ್ಯವಸ್ಥೆಯ ಕರ್ತವ್ಯವಾಗಿದೆ. ಗ್ರಾಮದಲ್ಲಿ ಮತ್ತೆ ಇಂತಹ ಘಟನೆಗಳು ನಡೆಯದಂತೆ ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು ಎಂದು ಆಗ್ರಹಿಸಿದರು.

ತಿಡಿಗೋಳ ಗ್ರಾಮದ ಸಂತ್ರಸ್ತರಿಗೆ ನೈತಿಕ ಧೈರ್ಯ ತುಂಬುವ ಜೊತೆಗೆ ದಲಿತರ ಮೇಲಿನ ದೌರ್ಜನ್ಯದ ವಿರುದ್ಧ ಸಂಘಟಿ–ತ ಹೋರಾಟದ ಸಂದೇಶ ಸಾರುವುದು ಈ ರ್‍ಯಾಲಿಯ ಉದ್ದೇಶವಾಗಿದೆ. ನವೆಂಬರ್ 8ರಂದು ನಡೆಯುವ 'ತಿಡಿಗೋಳ ಚಲೋ' ಹೋರಾಟದ ಮೂಲಕ ಪ್ರಕರಣದತ್ತ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಯ ಗಮನ ಸೆಳೆಯಲಾಗುವುದು ಎಂದು ಎಸ್. ಮಾರೆಪ್ಪ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ರವೀಂದ್ರನಾಥ ಪಟ್ಟಿ ಮಾತನಾಡಿದರು. ಈ ಸಂದರ್ಭದಲ್ಲಿ ಹೇಮರಾಜ ಅಸ್ಕಿಹಾಳ, ಎಂ.ಆರ್. ಭೇರಿ, ಶರಣಪ್ಪ ದಿನ್ನಿ, ಭೀಮಣ್ಣ ಮರ್ಚಟ್ಹಾಳ, ಜೈಭೀಮ ವಲ್ಲಭ್ ಹಾಗೂ ಲಕ್ಷ್ಮಣ ಕಲ್ಲೂರು ಉಪಸ್ಥಿತರಿದ್ದರು.

ವಚನ ದರ್ಶನ

ಉದಕದೊಳಗೆ ಬಯ್ಚಿಟ್ಟ ಬಯ್ಕೆಯ ಕಿಚ್ಚಿನಂತಿದ್ದಿತ್ತು
ಸಸಿಯೊಳಗಣ ರಸದ ರುಚಿಯಂತಿದ್ದಿತ್ತು, ನೆನೆಯೊಳಗಣ
ಪರಿಮಳದಂತಿದ್ದಿತ್ತು,ಕೂಡಲಸಂಗಮದೇವಾ, ಕನ್ನೆಯ
ಸ್ನೇಹದಂತಿದ್ದಿತ್ತು

ನೀವು ಕೇಳುತ್ತಿರುವುದು ಶಿವಶರಣ ವಿಶ್ವಗುರು ಶ್ರೀ ಬಸವಣ್ಣನವರ ಪ್ರಸಿದ್ಧ ವಚನಗಳಲ್ಲೊಂದಾದ ಉದಕದೊಳಗೆ ಬಚ್ಚಿಟ್ಟ ಬಯ್ಕೆಯ ಕಿಚ್ಚಿನಂತಿದ್ದಿತ್ತು.

ಈ ವಚನದಲ್ಲಿ ವಿಶ್ವಗುರು ಬಸವಣ್ಣನವರು ಭಗವಂತನ ಕೂಡಲಸಂಗಮದೇವನ ಅಸ್ತಿತ್ವ ಮತ್ತು ಆತನ ಸಾಕ್ಷಾತ್ಕಾರದ ಅನುಭೂತಿಯನ್ನು ಅದ್ಭುತವಾದ ಉಪಮೆಗಳ ಮೂಲಕ ವಿವ-ರಿಸಿದ್ದಾರೆ.

ಉದಕದೊಳಗೆ ಬಚ್ಚಿಟ್ಟ ಬಯ್ಕೆಯ ಕಿಚ್ಚಿನಂತಿದ್ದಿತ್ತು: ನೀರಿನ ಆಳದಲ್ಲಿ ಅಡಗಿರುವ ಬಡಬಾಗ್ನಿಯಂತೆ (ಜ್ವಾಲೆ) ದೇವರ ಶಕ್ತಿ ಜಗತ್ತಿನ ಕಣಕಣದಲ್ಲೂ ಗುಪ್ತವಾಗಿ ಅಡಗಿದೆ. ನೀರು ಮತ್ತು ಬೆಂಕಿ ಪರಸ್ಪರ ವಿರುದ್ಧವಾಗಿದ್ದರೂ ನೀರೊಳಗೆ ಉಷ್ಣತೆ ಇರುವಂತೆ, ಪ್ರಕೃತಿಯಲ್ಲಿ ಭಗವಂತನು ಅದೃಶ್ಯನಾಗಿ ನೆಲೆಸಿದ್ದಾನೆ.

ಸಸಿಯೊಳಗಣ ರಸದ ರುಚಿಯಂತಿದ್ದಿತ್ತು
ಚಿಕ್ಕದಾದ ಸಸ್ಯ ಅಥವಾ ಗಿಡದೊಳಗೆ ಇರುವ ರಸದ ರುಚಿಂ-ತುನ್ನು ಮೇಲ್ನೋಟಕ್ಕೆ ನೋಡಿ ತಿಳಿಯಲು ಸಾಧ್ಯವಿಲ್ಲ, ಅದನ್ನು ಅನುಭವಿಸಿಯೇ ತಿಳಿಯಬೇಕು. ಹಾಗೆಯೇ ದೇವರನ್ನು ಕಣ್ಣಿಗೆ ಕಾಣದಿದ್ದರೂ ಅನುಭವದಿಂದ ಅರಿಯಬಹುದು.

ನೆನೆಯೊಳಗಣ ಮೊಗ್ಗಿನೊಳಗಣ ಪರಿಮಳದಂತಿದ್ದಿತ್ತು
ಹೂವಾಗುವ ಮುನ್ನ ಮೊಗ್ಗಿನೊಳಗೆ ಸುಗಂಧವು ಹೇಗೆ ಅಡಗಿರುತ್ತದೆಯೋ, ಹಾಗೆ ಭಗವಂತನ ಅಸ್ತಿತ್ವವು ಜಗತ್ತಿನಲ್ಲಿ ಅವಿಭಾಜ್ಯವಾಗಿದೆ. ಹೂವು ಅರಳಿದಾಗ ಪರಿಮಳ ಹರಡುವಂತೆ, ಭಕ್ತಿ ಪಕ್ವವಾದಾಗ ದೇವರು ಪ್ರಕಟನಾಗುತ್ತಾನೆ.

ಕನ್ನೆಯೊಳಗಣ ಒಲವಿನಂತಿದ್ದಿತ್ತು
ಒಬ್ಬ ಹೆಣ್ಣುಮಗಳ ಮನಸ್ಸಿನಲ್ಲಿರುವ ಪ್ರೀತಿ ಅಥವಾ ಒಲವು ಕಣ್ಣಿಗೆ ಕಾಣಿಸುವುದಿಲ್ಲ, ಆದರೆ ಅವಳು ಪ್ರೀತಿಸಿದಾಗ ಮಾತ್ರ ಅದು ವ್ಯಕ್ತವಾಗುತ್ತದೆ. ಅದೇ ರೀತಿ ಭಕ್ತನಲ್ಲಿ ನಿಜವಾದ ಭಕ್ತಿ ಮೂಡಿದಾಗ ಕೂಡಲಸಂಗಮದೇವನ ಸಾನ್ನಿಧ್ಯದ ಅರಿವಾಗುತ್ತದೆ.

ದೇವರು ಎಲ್ಲೋ ದೂರದಲ್ಲಿಲ್ಲ, ಅವನು ನಮ್ಮೊಳಗೇ, ಈ ಸೃಷ್ಟಿಯ ಪ್ರತಿ ಜೀವಿಯಲ್ಲೂ ಅತ್ಯಂತ ಸೂಕ್ಷ್ಮವಾಗಿ, ಅದೃಶ್ಯವಾಗಿ ಹಾಸುಹೊಕ್ಕಾಗಿದ್ದಾನೆ ಎಂಬುದನ್ನು ಬಸವಣ್ಣನವರು ಈ ವಚನದಲ್ಲಿ ತಿಳಿಸಿಕೊಟ್ಟಿದ್ದಾರೆ.ಬಸವಾದಿ ಶರಣರ ವಚನಗಳು ಮನುಕುಲದ ದಾರಿದೀಪ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ ಅಂತರಗಂಗಿ-ಸಿಂಧನೂರು. 998094144

ಗಿಡ ಮರಗಳ ರಕ್ಷಣೆಯ ಜೊತೆಗೆ ಅಪಘಾತಕ್ಕೋಳಗಾದ ಹಸುವಿನ ರಕ್ಷಣೆ ಮಾಡಿ ಮಾನವೀಯತೆ ಮೆರೆದ ವನಸಿರಿ ಅಮರೇಗೌಡ ಮಲ್ಲಾಪುರ ಅವರಿಗೆ ಸಾರ್ವಜನಿಕ ವಲಯಲ್ಲಿ ಮೆಚ್ಚುಗೆ



❏ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ನಗರದ ಆದರ್ಶ ಕಾಲೋನಿಯಲ್ಲಿ **ಬಿಡಾಡಿ ದನಗಳು ಎಲ್ಲೆಂದರಲ್ಲಿ ತಿರುಗಾಡುತ್ತಿದ್ದಾಗ ಹಸು(ಆಕಳು)ಹೊಂದಕ್ಕೆ ವಾಹನ ಡಿಕ್ಕಿ ಹೊಡೆದ ಪರಿಣಾಮ ಅಪಘಾತ ಸಂಭಾವಿದಾಗ ಅಲ್ಲಿದ್ದ ಸಾರ್ವಜನಿಕರು ವನಸಿರಿ ಅಮರೇಗೌಡ ಮಲ್ಲಾಪುರ ಅವರಿಗೆ ಕರೆ ಮಾಡಿ ತಿಳಿಸಿದರು.ತಕ್ಷಣ ಸ್ಥಳಕ್ಕೆ ಧಾವಿಸಿದ ಪರಿಸರ ಪ್ರೇಮಿ ಅಮರೇಗೌಡ ಮಲ್ಲಾಪುರ ಅವರು ಪಶು ವೈದ್ಯರ ಮೂಲಕ ಚಿಕಿತ್ಸೆ ಕೊಡಿಸಿ ಮಾನವೀಯತೆ ಮೆರೆದರು.**

ಸಿಂಧನೂರು ಪುಶು ವೈದ್ಯಧಿಕಾರಿ ಡಾ.ಮಲ್ಲಿಕಾರ್ಜುನ ಅವರಿಗೆ ಮಾಹಿತಿ ತಿಳಿಸಿದಾಗ ಪಶು ಆಸ್ಪತ್ರೆ ಸಿಬ್ಬಂದಿ ರಾಜ ಅವರು ಆಗಮಿಸಿ ಅಪಘಾತಕ್ಕೆ ಒಳಗಾದ ಹಸುವನ್ನು ಪರೀಕ್ಷಿಸಿದಾಗ ಹಸುವಿನ ಬಾಯಲ್ಲಿ ಹುಳುಗಳು ಮತ್ತು ಮೈಮೇಲೆ ಚುಕ್ಕಿ ರೋಗ ಕಂಡು ಬಂತು.ನಂತರ ಇದಕ್ಕೆ ಚಿಕಿತ್ಸೆ ನೀಡಿದರು.ಚಿಕಿತ್ಸೆ ಕೊಡಿಸಿ ಮಾನವೀಯತೆ ಮೆರೆದ ಅಮರೇಗೌಡ ಮಲ್ಲಾಪುರ ಅವರಿಗೆ ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಯಿತು.

ಅಮರೇಗೌಡ ಮಲ್ಲಾಪುರ ಅವರು ಗಿಡ ಮರಗಳನ್ನು ಉಳಿಸಿ ಬೆಳೆಸುವ ಮೂಲಕ ಪರಿಸರ ಸಂರಕ್ಷಣೆಯಲ್ಲಿ ದೊಡಗಿದವರು.ಇದರ ಜೊತೆ ಜೊತೆಗೆ ಪ್ರಾಣಿ ಪಕ್ಷಿಗಳನ್ನು ರಕ್ಷಣೆ ಮಾಡುತ್ತಿರುವುದು ತುಂಬಾ ಶ್ಲಾಘನೀಯ ಎಂದು ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಗುತ್ತಿದೆ.

ಬಸವಣ್ಣನವರು ಹೇಳಿದಂತೆ ಪ್ರತಿಯೊಬ್ಬ ವ್ಯಕ್ತಿಯೂ ಸಕಲ ಜೀವಿಗಳ ಮೇಲೆ ಪ್ರೀತಿ ಮತ್ತು ಕರುಣೆ ತೋರುವುದು ಧರ್ಮದ ಮೂಲ.ಪ್ರತಿಯೊಬ್ಬರೂ ಪ್ರಾಣಿ-ಪಕ್ಷಿ,ಗಿಡಮರಗಳನ್ನು ರಕ್ಷಣೆ ಮಾಡುವ ಮೂಲಕ ಸಕಲ ಜೀವರಾಶಿಗಳ ಮೇಲೆ ದಯೇ ಕರುಣೆ ತೋರಬೇಕು ಎಂದು ವನಸಿರಿ ಅಮರೇಗೌಡ ಮಲ್ಲಾಪುರ ಅವರು ತಿಳಿಸಿದರು.

ಶಾಂತಿನಗರದಲ್ಲಿ 5 ವರ್ಷದ ಹೆಣ್ಣು ಮಗುವಿನ ಮೇಲೆ ಬೀದಿನಾಯಿಗಳ ದಾಳಿ, ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲು

❏ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ತಾಲೂಕಿನ ಶಾಂತಿನಗರ (ಹಂಚಿನಾಳ ಕ್ಯಾಂಪ್) ದಲ್ಲಿ ಬುಧವಾರದಂದು ಶ್ರಾವಣಿ ತಂ.ಹನುಮಂತ ಕುಂಬಾರ 5 ವರ್ಷದ ಹೆಣ್ಣು ಮಗುವಿಗೆ ಬೀದಿ ನಾಯಿಗಳು ಕಚ್ಚಿದ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಇದೇ ವರ್ಷದಲ್ಲಿ ಕಳೆದ ಜುಲೈ ತಿಂಗಳಲ್ಲಿ ಬೀದಿ ನಾಯಿಗಳ ಅಟ್ಟಹಾಸದ ರಕ್ಕಸ ದಾಳಿಗೆ 18 ತಿಂಗಳ ಹಸುಗೂಸು ಬಲಿಯಾದ ಹೃದಯ ವಿದ್ರಾವಕ ಘಟನೆಯೊಂದು ಜರುಗಿಹೋಗಿ ಶಾಂತವಾಗಿದ್ದ ಶಾಂತಿನಗರದ ಜನರು ಅಕ್ಷರಶಃ ಬೆಚ್ಚಿ ಬಿದ್ದಿದ್ದರು.

ಈ ಘಟನೆಯನ್ನು ಮರೆಯುವ ಮುನ್ನವೇ ಮತ್ತೊಂದು 5 ವರ್ಷದ ಹೆಣ್ಣು ಮಗವಿನ ಮೇಲೆ ಬೀದಿ-ನಾಯಿಗಳು ಮುಗಿಬಿದ್ದು ಕಾಲಿಗೆ ಕೈಗೆ ಕಡಿದ ಪರಿಣಾಮ ತುಂಬಾ ಗಾಯಗಳಾಗಿ ನರಳಾಡುತ್ತಿದೆ.



ಮಗುವಿನ ಪಾಲಕರು ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸುತ್ತಿದ್ದಾರೆ. ಆದರೆ, ಶಾಂತಿನಗರದಲ್ಲಿ ಬೀದಿ ನಾಯಿಗಳ ಹಾವಳಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಸಾರ್ವಜನಿಕರು ಆತಂಕದಲ್ಲಿ ಜೀವನ ನಡೆಸುವಂತಾಗಿದೆ. ರಸ್ತೆಯಲ್ಲಿ ಸಂಚರಿಸುವ ಮಕ್ಕಳು, ವೃದ್ಧರು, ಹಾಗೂ ದ್ವಿಚಕ್ರ ವಾಹನ ಸವಾರರಿಗೆ ಬೀದಿ ನಾಯಿಗಳಿಂದ ದಿನವೂ ತೊಂದರೆಯಾಗುತ್ತಿದೆ.

ಈ ಬೀದಿನಾಯಿಗಳ ಉಪಟಳದ ಕುರಿತು ಈಗಾಗಲೇ ಸಂಬಂಧಪಟ್ಟ ಅಧಿಕಾ-ರಿಗಳ ಗಮನಕ್ಕೆ ತಂದರೂ ಸಹ ಯಾವುದೇ ಸೂಕ್ತವಾದ ಕ್ರಮ ಕೈಗೊಳ್ಳುತ್ತಿಲ್ಲ. ಜನ-ರಿಗೆ ಅಗತ್ಯವಾದ ಸೌಲಭ್ಯ ಕಲ್ಪಿಸುವ ಭರವಸೆ ನೀಡಿದರೂ ಇದುವರೆಗೂ ಯಾವುದೇ ಕ್ರಮವನ್ನು ಕೈಗೊಂಡಿಲ್ಲ. ಈ ಬಗ್ಗೆ ಅಧಿಕಾ-ರಿಗಳನ್ನು ಪ್ರಶ್ನಿಸಿದರೆ, ಸಮರ್ಪಕ ಉತ್ತರ ನೀಡದೆ, ಮೌನ ವಹಿಸುತ್ತಿದ್ದು, ಇದು ಶಾಂತಿನಗರದ ಸಾರ್ವಜನಿಕರಿಗೆ ಅಸಮಾಧಾನ ತರಿಸಿದೆ. ಇದೇ ರೀತಿ ಇದೇ ವರ್ಷದಲ್ಲಿ ಈ ಕ್ಯಾಂಪಿನಲ್ಲಿ ಮೂರು ಪ್ರಕರಣ ಆಗಿವೆ. ಕಳೆದ ಶನಿವಾರ ದಾರಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಒಬ್ಬ ವೃದ್ದನಿಗೂ ಬೀದಿ-ನಾಯಿಗಳು ಕಚ್ಚಿವೆ. ಆದರೂ ಅಧಿಕಾರಿಗಳು ಮೌನ ವಹಿಸಿದ್ದಾರೆ. ಶಾಂತಿನಗರದ ಸಾರ್ವಜನಿಕರ ಸುರಕ್ಷತೆಗೆ ಹೊಣೆ ಯಾರು. ಅಧಿಕಾ-ರಿಗಳ ನಿರ್ಲಕ್ಷ್ಯಕ್ಕೆ ಕೊನೆ ಯಾವಾಗ ಎಂದುಪ್ರಶ್ನಿಸಿದರು.

ಬೀದಿ ನಾಯಿಗಳ ಹಾವಳಿಯಿಂದ ಸಾರ್ವಜನಿಕರಿಗೆ ಅಪಾಯ ಸಂಭವಿಸುವ ಮುನ್ನವೇ ಸಂಬಂಧಪಟ್ಟ ಅಧಿಕಾರಿಗಳು, ನಗರಸಭೆ ಹಾಗೂ ಗ್ರಾ.ಪಂಚಾಯಿತಿ ಅಧಿಕಾ-ರಿಗಳು, ಎಚ್ಚೆತ್ತುಕೊಂಡು ಶಾಂತಿನಗರದಲ್ಲಿ ಶಾಂತಿ ಕಾಪಾಡಲು ಮತ್ತು ಮಕ್ಕಳು, ವೃದ್ದರು, ಬೈಕ್ ಸವಾರರು ನಾಯಿಗಳ ಭಯವಿಲ್ಲದೆ ತಿರುಗಾಡಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ, ಸೂಕ್ತ ಕ್ರಮ ಕೈಗೊಳ್ಳದೆ ಹೋದರೆ, ಸಿಂಧನೂರಿನ ನಗರಸಭೆ ಮುಂದೆ ಶಾಂತಿನಗರದ ಸಾರ್ವಜನಿಕರೆಲ್ಲರೂ ಸೇರಿ ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಅಂತರ್ಜಾತೀಯ ವಿವಾಹ ಮಹಿಳೆಗೆ ಜಾತಿ ನಿಂದನೆ, ಕಿರುಕುಳ: ನ್ಯಾಯಕ್ಕೆ ಆಗ್ರಹ

❏ ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ನ 07 – ಅಂತರ್ಜಾತೀಯ ವಿವಾಹವಾಗಿದ್ದಕ್ಕೆ ಮಹಿಳೆ ಹಾಗೂ ಆಕೆಯ ಇಬ್ಬರು ಅಪ್ರಾಪ್ತ ಮಕ್ಕಳಿಗೆ ಜಾತಿ ಆಧಾರಿತ ನಿಂದನೆ, ಕೌಟುಂಬಿಕ ದೌರ್ಜನ್ಯ ಮತ್ತು ಸಾಮಾಜಿಕ ಬಹಿಷ್ಕಾರ ಹಾಕಿರುವ ಘಟನೆಯನ್ನು ಖಂಡಿಸಿ ಅಖಿಲ ಭಾರತ ಕ್ರಾಂತಿ-ಕಾರಿ ಮಹಿಳಾ ಸಂಘಟನೆ (AIRWO) ನೇತೃತ್ವದಲ್ಲಿ ಪಟ್ಟಣದ ಬಾಬಾ ಸಾಹೇಬ್ ಅಂಬೇಡ್ಕರ್ ವೃತ್ತದಲ್ಲಿ ಧರಣಿ ಸತ್ಯಾಗ್ರಹ ನಡೆಸಲಾಯಿತು.

ಲಿಂಗಸಗೂರು ಪಟ್ಟಣದ ಗಡಿಯಾರ ಚೌಕದ ಫುಟ್‌ಪಾತ್‌ನಲ್ಲಿ ವಾಸಿಸುತ್ತಿರುವ ಶ್ರೀಮತಿ ಅಮೃತ್ (26) ಅವರು 2021ರಲ್ಲಿ ದರ್ಶನ್ ಮೆಹತಾ ಎಂಬುವವರನ್ನು ಅಂತರ್ಜಾತೀಯ ವಿವಾಹವಾಗಿದ್ದರು. ದಂಪತಿಗೆ ಇಬ್ಬರು ಮಕ್ಕಳಿದ್ದಾರೆ. ಆದರೆ, ಕಳೆದ ಒಂದು ವರ್ಷದಿಂದ ಪತಿ ದರ್ಶನ್



ಮೆಹತಾ ಪತ್ನಿ ಹಾಗೂ ಮಕ್ಕಳನ್ನು ತೊರೆದು ತಮ್ಮ ಪೋಷಕರೊಂದಿಗೆ ವಾಸಿಸುತ್ತಿದ್ದಾರೆ. ಕಳೆದ 30 ದಿನಗಳಿಂದ ಅಮೃತ್ ಅವರು ಮಕ್ಕಳೊಂದಿಗೆ ಗಂಡನ ಮನೆಗೆ ಸೇ-ರಿಸಿಕೊಳ್ಳುವಂತೆ ಮನವಿ ಮಾಡುತ್ತಿದ್ದರೂ, ಗಂಡ ಹಾಗೂ ಅವರ ಕುಟುಂಬದವರು ಮನೆಗೆ ಸೇ-ರಿಸಿಕೊಳ್ಳದೆ ಜಾತಿ ನಿಂದನೆ ಮಾಡಿ, ನಾಯಿಯನ್ನು ಬಿಟ್ಟು ಬೆದರಿಸುವಂತಹ ಅಮಾನವೀಯ ಕೃತ್ಯ ಎಸಗಿದ್ದಾರೆ ಎಂದು ಸಂಘಟನೆ ಆರೋಪಿಸಿದೆ.

ಇದರಿಂದಾಗಿ ಸಂತ್ರಸ್ತೆ ಹಾಗೂ ಮಕ್ಕಳು ಬೀದಿಯಲ್ಲಿ ವಾಸಿಸುವ ಸ್ಥಿತಿ ನಿರ್ಮಾಣವಾಗಿದೆ. ಸಂತ್ರಸ್ತೆ ನೀಡಿದ ದೂರಿನನ್ವಯ ಪತಿ ದರ್ಶನ್ ಮೆಹತಾ ಹಾಗೂ ಆತನ ಕುಟುಂಬದವರ ವಿರುದ್ಧ ತಕ್ಷಣ ಎಫ್‌ಐಆರ್ (FIR) ದಾಖಲಿಸಿ, ಜಾತಿ ದೌರ್ಜನ್ಯ ತಡೆ ಕಾಯ್ದೆ ಹಾಗೂ ಕೌಟುಂಬಿಕ ದೌರ್ಜನ್ಯ ಪ್ರತಿಬಂಧಕ ಕಾಯ್ದೆಯಡಿ ಸೂಕ್ತ ಕ್ರಮ ಕೈಗೊಳ್ಳಬೇಕು. ಸಂತ್ರಸ್ತೆ ಹಾಗೂ ಮಕ್ಕಳಿಗೆ ತಕ್ಷಣವೇ ಸೂಕ್ತ ಪೊಲೀಸ್ ರಕ್ಷಣೆ ಒದಗಿಸಿ, ಗಂಡನ ಮನೆಯಲ್ಲಿ ವಸತಿಗೆ ವ್ಯವಸ್ಥೆ ಕಲ್ಪಿಸಬೇಕು. ಪತಿಯಿಂದ ಪತ್ನಿ ಹಾಗೂ ಇಬ್ಬರು ಮಕ್ಕಳಿಗೆ ಅಗತ್ಯ ಆಹಾರ, ವಸತಿ, ಶಿಕ್ಷಣ ಮತ್ತು ವೈದ್ಯಕೀಯ ವೆಚ್ಚ ದೊರೆಯುವಂತೆ ಕಾನೂನು ನೆರವು ನೀಡಬೇಕು ಎಂದು ಆಗ್ರಹಿಸಿದ ಮನವಿ ಪತ್ರವನ್ನು ತಹಸೀಲ್ದಾರ್ ಮೂಲಕ ರಾಜ್ಯ ಮಹಿಳಾ ಆಯೋಗಕ್ಕೆ ಸಲ್ಲಿಸಲಾಯಿತು.

ಈ ಪ್ರತಿಭಟನೆಯಲ್ಲಿ ಸಂಘಟನೆಯ ತಾಲೂಕ ಅಧ್ಯಕ್ಷೆ ಶಿವಮ್ಮ ವಿರಾಪೂರ, ಸಿಪಿಐಎಂನ ಮುಖಂಡರಾದ ಆರ್. ಮಾನಸಯ್ಯ, ದುರುಗಪ್ಪ ಅಗ್ರಹಾರ, ಲಿಂಗಪ್ಪ ಪರಂಗಿ, ಬಸವರಾಜ ಬಾಗಲವಾಡ, ಆದೇಶ ನಗನೂರು, ಹಾಗೂ ಮಹಿಳಾ ಮುಖಂಡರುಗಳಾದ ವಿಜಯರಾಣಿ ಸಿರವಾರ, ರತ್ನ ಕಟ್ಟಿಮನಿ, ಸಂಘಟನೆಯ ಪದಾಧಿಕಾರಿಗಳು ಮತ್ತು ದಲಿತ ಮುಖಂಡರುಗಳು ಭಾಗವಹಿಸಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.



ತಿಡಿಗೋಳದಲ್ಲಿ ದಲಿತರ ಮೇಲಿನ ಹಲ್ಲೆ ಖಂಡಿಸಿ ನ.8ರಂದು ಬೈಕ್ ರ್ಯಾಲಿ: ವೆಲ್ಫೇರ್ ಪಾರ್ಟಿ ಬೆಂಬಲ

ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹ – ಸಂತ್ರಸ್ತ ಕುಟುಂಬಕ್ಕೆ ರಕ್ಷಣೆ ಮತ್ತು ನ್ಯಾಯ ಒದಗಿಸಲು ಒತ್ತಾಯ

❏ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ರಾಯಚೂರು ಜಿಲ್ಲೆಯ ಸಿಂಧನೂರು ತಾಲೂಕಿನ ತಿಡಿಗೋಳ ಗ್ರಾಮದಲ್ಲಿ ದಲಿತರ ಮೇಲೆ ನಡೆದಿರುವ ಹಲ್ಲೆ ಘಟನೆಯನ್ನು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ತೀವ್ರವಾಗಿ ಖಂಡಿಸಿದೆ. ಸಮಾಜದಲ್ಲಿ ಸಮಾನತೆ, ಸಹಬಾಳ್ವೆ ಮತ್ತು ಮಾನವೀಯ ಮೌಲ್ಯಗಳು ನೆಲೆಸಬೇಕಾದ ಸಂದರ್ಭದಲ್ಲಿ ಜಾತಿಯ ಆಧಾರದ ಮೇಲೆ ದೌರ್ಜನ್ಯ ನಡೆಯುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ ಎಂದು ಪಕ್ಷದ ರಾಯಚೂರು ಜಿಲ್ಲಾಧ್ಯಕ್ಷ ಶೇಖ್ ಫರೀದ್ ಉಮರಿ ತಿಳಿಸಿದ್ದಾರೆ.

ಭಾರತದ ಸಂವಿಧಾನ ಪ್ರತಿಯೊಬ್ಬ ನಾಗ-ರಿಕನಿಗೂ ಜಾತಿ, ಧರ್ಮ, ಭಾಷೆ ಹಾಗೂ ವರ್ಗದ ಭೇದವಿಲ್ಲದೆ ಸಮಾನತೆಯ ಹಕ್ಕು, ಸ್ವಾಭಿಮಾನ ಮತ್ತು ಘನತೆಯಿಂದ ಬದುಕುವ ಅವಕಾಶವನ್ನು ಕಲ್ಪಿಸಿದೆ. ಆದರೆ ಇಂದಿಗೂ ದಲಿತ ಸಮುದಾಯದ ಮೇಲೆ ಹಲ್ಲೆ, ದೌರ್ಜನ್ಯ ಹಾಗೂ ಅವಮಾನಕಾರಿ ಘಟನೆಗಳು ನಡೆಯುತ್ತಿರುವುದು ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ತಿಡಿಗೋಳ ಗ್ರಾಮದಲ್ಲಿ ನಡೆದಿರುವ ಘಟನೆಯ ಬಗ್ಗೆ ಪೊಲೀಸ್ ಇಲಾಖೆ ಯಾವುದೇ ಒತ್ತಡಕ್ಕೆ ಮಣಿಯದೆ ನಿಷ್ಪಕ್ಷಪಾತ ತನಿಖೆ ನಡೆಸಬೇಕು. ಘಟನೆಯಲ್ಲಿ ಭಾಗಿಯಾಗಿರುವ ತಪ್ಪಿತಸ್ಥರನ್ನು ಗುರುತಿಸಿ, ಅವರ ವಿರುದ್ಧ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೇಲಿನ ದೌರ್ಜನ್ಯ ತಡೆ ಕಾಯ್ದೆ ಸೇ-ರಿದಂತೆ ಅನ್ವಯವಾಗುವ ಕಾನೂನುಗಳ ಅಡಿಯಲ್ಲಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಅಲ್ಲದೆ, ಸಂತ್ರಸ್ತ ಕುಟುಂಬಕ್ಕೆ ಸೂಕ್ತ ಪೊಲೀಸ್ ರಕ್ಷಣೆ ಒದಗಿಸುವುದರ ಜೊತೆಗೆ, ಅವ-ರಿಗೆ ನ್ಯಾಯಬದ್ಧ ಪರಿಹಾರ, ವೈದ್ಯಕೀಯ ಹಾಗೂ ಕಾನೂನು ನೆರವು ನೀಡಬೇಕು. ಇಂತಹ ಘಟನೆಗಳು ಮರುಕಳಿಸದಂತೆ ಗ್ರಾಮದಲ್ಲಿ ಶಾಂತಿ, ಸೌಹಾರ್ದತೆ



ಮತ್ತು ಸಾಮಾಜಿಕ ಸಾಮರಸ್ಯ ಕಾಪಾಡಲು ಜಿಲ್ಲಾಡಳಿತ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ನ.8ರ ಬೈಕ್ ರ್ಯಾಲಿಗೆ ಬೆಂಬಲ ತಿಡಿಗೋಳ ಗ್ರಾಮದಲ್ಲಿ ದಲಿತರ ಮೇಲಿನ ಹಲ್ಲೆಯನ್ನು ಖಂಡಿಸಿ, ಸಂತ್ರಸ್ತರಿಗೆ ನ್ಯಾಯ ದೊರಕಿಸಿಕೊಡುವ ಉದ್ದೇಶದಿಂದ ದಲಿತ ಪ್ರಗತಿಪರ ಒಕ್ಕೂಟದ ನೇತೃತ್ವದಲ್ಲಿ ನವೆಂಬರ್ 8ರಂದು ಸಿಂಧನೂ-ರಿನಿಂದ ತಿಡಿಗೋಳ ಗ್ರಾಮದವರೆಗೆ ಹಮ್ಮಿಕೊಂಡಿರುವ ಬೈಕ್ ರ್ಯಾಲಿಗೆ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಸಂಪೂರ್ಣ ಬೆಂಬಲ ಸೂಚಿಸಿದೆ.

ಸಾಮಾಜಿಕ ಅನ್ಯಾಯ, ಜಾತಿ ತಾರತಮ್ಯ ಮತ್ತು ದೌರ್ಜನ್ಯದ ವಿರುದ್ಧ ಪ್ರಜಾಸತ್ತಾತ್ಮಕವಾಗಿ ಧ್ವನಿ ಎತ್ತುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾ-ರಿಯಾಗಿದೆ. ದಲಿತ ಸಮುದಾಯದ ಸ್ವಾಭಿಮಾನ, ಹಕ್ಕು ಮತ್ತು ಘನತೆಯ ರಕ್ಷಣೆಗೆ ಎಲ್ಲ ಪ್ರಜಾಪ್ರಭುತ್ವ ಹಾಗೂ ಪ್ರಗತಿಪರ ಸಂಘಟನೆಗಳು ಒಗ್ಗಟ್ಟಿನಿಂದ ನಿಲ್ಲಬೇಕು. ಸಂತ್ರಸ್ತರಿಗೆ ನ್ಯಾಯ ದೊರೆಯುವವರೆಗೂ ನ್ಯಾಯಪರ ಧ್ವನಿ ಮೊಳಗಬೇಕು ಎಂದು ಶೇಖ್ ಫ-ರೀದ್ ಉಮರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶೇಖ್ ಫರೀದ್ ಉಮರಿ ಜಿಲ್ಲಾಧ್ಯಕ್ಷರು, ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ,ರಾಯಚೂರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINT-ERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101